www.janavaadi.in

# ಜನವಾದಿ

ರಾಯಚೂರು
ಕಲಬುರಗಿ
ಯಾದಗಿರಿ
ಕೊಪ್ಪಳ
ಬಳ್ಳಾರಿ
ಬೀದರ್

ಸಂಪಾದಕ : ಬಸವರಾಜ ಹೆಚ್
Editor : Basavaraj H

ಜನರ ಅಂತರಂಗದ ಧ್ವನಿ
ಕನ್ನಡ ದಿನಪತ್ರಿಕೆ

JANAVAADI
Kannada Daily News Paper

ಸಂಪುಟ : 11 ಸಂಚಿಕೆ : 297 ಪುಟ:4 ರಾಯಚೂರು ಶನಿವಾರ 14–06–2025 RNI NO.KARKAN/2012/56428 ಮೊಬೈಲ್: 9448300139,9449711232. e-mail : janavaadi@gmail.com ಬೆಲೆ : 2 ರೂ.

VOLUME : 11 ISSUE : 297 PAGES : 4 RAICHUR SATURDAY 14-06-2025 RNI NO.KARKAN/2012/56428 MOBILE:9448300139,9449711232. E-MAIL:janavaadi@gmail.com PRICE : 2 RS.

## ಜೂನ್ 25ರಂದು ವಿವಿಧ ಹುದ್ದೆಗಳ ಭರ್ತಿಗೆ ನೇರ ಸಂದರ್ಶನ

**ಜನವಾದಿ ವಾರ್ತೆ**

ರಾಯಚೂರು ಜೂ 13 – ಕರ್ನಾಟಕ ಮಿದುಳಿನ ಆರೋಗ್ಯ ಉಪಕ್ರಮ ಕಾರ್ಯಕ್ರಮಯಡಿ ಸಾರ್ವಜನಿಕ ಹಿತದೃಷ್ಠಿಯಿಂದ ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ನೇರ ಸಂದರ್ಶನದಲ್ಲಿ ನ್ಯೂರಾಲಜಿಸ್ಟ್, ಫಿಸಿಸಿಯನ್, ವೈದ್ಯಕೀಯ ಅಧಿಕಾರಿ–01, ಶುಶ್ರೂಷಕರು–01, ಫಿಜಿಯೋಥೆರಪಿಸ್ಟ್–01, ಸ್ಪೀಚ್ ಥೆರಪಿಸ್ಟ್–01, ಕ್ಲಿನಿಕಲ್ ಸೈಕಾಲಜಿಸ್ಟ್–01, ಜಿಲ್ಲಾ ಸಂಯೋಜಕರು–01, ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ಜೂನ್ 25ರ ಬೆಳಿಗ್ಗೆ 10:30 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಗಳ ಕಚೇರಿಯ ಕಾರ್ಯಲಯದಲ್ಲಿ ನೇರ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕುಷ್ಠರೋಗ ನಿವಾರಣ ಅಧಿಕಾರಿಗಳ ಕಾರ್ಯಲಯ ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಬೆಳವಣಿಗೆಗೆ ಕರ್ನಾಟಕದ ಆರ್ಥಿಕ ಶಕ್ತಿಯೇ ಇಂಧನ:

# 16ನೇ ಹಣಕಾಸು ಆಯೋಗದ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಪ್ರತಿಪಾದನೆ

ನವದೆಹಲಿ ಜೂ 13– ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು 16ನೇ ಹಣಕಾಸು ಆಯೋಗದ ಅಧ್ಯಕ್ಷ ಅರವಿಂದ ಪರಗಾರಿಯಾ ಮತ್ತು ಸದಸ್ಯರನ್ನು ಭೇಟಿಯಾಗಿ ರಾಜ್ಯದ ಹೆಚ್ಚುವರಿ ಜ್ಞಾಪನಾ ಪತ್ರವನ್ನು ಆಯೋಗಕ್ಕೆ ಸಲ್ಲಿಸಿದರು.



16ನೇ ಹಣಕಾಸು ಆಯೋಗದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಕರ್ನಾಟಕದ ಆರ್ಥಿಕ ಬಲವು ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಕರ್ನಾಟಕ ಆರ್ಥಿಕವಾಗಿ ಬೆಳವಣಿಗೆಯಾದರೆ ಕೇಂದ್ರ ಸರ್ಕಾರದ ಬೆಳವಣಿಗೆಯೂ ಆಗುತ್ತದೆ. ಹಾಗಾಗಿ ನ್ಯಾಯಯುತವಾಗಿ ತೆರಿಗೆ ಹಂಚಿಕೆಯಾಗಬೇಕು ಎಂದು ಕೋರಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಪ್ರತಿ ವರ್ಷ 4.5 ಲಕ್ಷ ಕೋಟಿ ತೆರಿಗೆ ನೀಡುತ್ತದೆ. ಒಂದು ರೂ.ಗಳು ನೀಡಿದರೆ 15 ಪೈಸೆ ನಮಗೆ ವಾಪಸ್ಸು ಬರುತ್ತದೆ. ಈ ಅನ್ಯಾಯ 16ನೇ ಹಣಕಾಸು ಆಯೋಗದಲ್ಲಿ ಆಗಬಾರದು. 14ನೇ ಹಣಕಾಸು ಆಯೋಗದಲ್ಲಿ ನಮ್ಮ ತೆರಿಗೆ ಪಾಲು 4.713% ಕ್ಕೆ ಮತ್ತು 15 ನೇ ಹಣಕಾಸು ಆಯೋಗದಲ್ಲಿ ತೆರಿಗೆ ಪಾಲು 3.647%ಕ್ಕೆ ಇಳಿಕೆ ಮಾಡಿದ್ದರಿಂದ ತೆರಿಗೆ ಹಂಚಿಕೆಯಲ್ಲಿ ನಮ್ಮ ಪಾಲನ್ನು ಒಟ್ಟಾರೆ 23% ರಷ್ಟು ಇಳಿಕೆ ಮಾಡಲಾಗಿದೆ. 5 ವರ್ಷಗಳಲ್ಲಿ ಒಟ್ಟು 68,275 ಕೋಟಿ ರೂ.ಗಳು ಕಡಿಮೆಯಾಗಿದೆ ಎಂದು ಮನವಿ ಮನವರಿಕೆ ಮಾಡಿಕೊಟ್ಟರು.

ಸೆಸ್, ಸರ್ಚಾರ್ಜ್ ನಲ್ಲಿ ಪಾಲು ಕೊಡದ ಕೇಂದ್ರ ಸರ್ಕಾರ: ಕೇಂದ್ರ ಸರ್ಕಾರ ಸೆಸ್ ಮತ್ತು ಸರ್ಚಾರ್ಜ್ ನಲ್ಲಿ ನಮಗೆ ಮಾತ್ರವಲ್ಲ ಯಾವ ರಾಜ್ಯಕ್ಕೂ ಪಾಲು ಕೊಡುವುದಿಲ್ಲ. ಕರ್ನಾಟಕದಿಂದ 2024–25ರಲ್ಲಿ ಒಟ್ಟು ರೂ. 5,41,709 ಕೋಟಿ ಸಂಗ್ರಹವಾಗಿದೆ. 8,084 ಕೋಟಿ ರೂ.ಗಳು ಕರ್ನಾಟಕ್ಕೆ ನಷ್ಟವಾಗಿದೆ. ಸೆಸ್ ಮತ್ತು ಸರ್ಚಾಜ್ ಶೇ.5ನ್ನು ಮೀರಬಾರದು, ಒಂದು ವೇಳೆ 5% ಮೀರಿದರೆ ರಾಜ್ಯಗಳ ತೆರಿಗೆ ಹಂಚಿಕೆಯ ಪಾಲಿನಲ್ಲಿ ಶೇ.50 ರಷ್ಟು ಹೆಚ್ಚಳ ಮಾಡಬೇಕು ಎಂದು ಮನವಿ ಮಾಡಲಾಗಿದೆ ಎಂದರು.

ಬೆಂಗಳೂರು ಅಭಿವೃದ್ಧಿಗೆ 1ಲಕ್ಷದ 15 ಸಾವಿರ ಕೋಟಿ ಅನುದಾನಕ್ಕೆ ಮನವಿ: 15ನೇ ಹಣಕಾಸಿನ ಆಯೋಗವು ರಾಜ್ಯಕ್ಕೆ 5,495 ಕೋಟಿ ರೂ.ಗಳ ವಿಶೇಷ ಅನುದಾನವನ್ನು ಕರ್ನಾಟಕ, ತೆಲಂಗಾಣ ಮತ್ತು ಮಿಜೋರಾಂ ರಾಜ್ಯಗಳಿಗೆ ಒದಗಿಸಬೇಕೆಂದು ಶಿಫಾರಸ್ಸು ಮಾಡಿತ್ತು. ಆದರೆ ಕೇಂದ್ರ ಸರ್ಕಾರ ಈ ಅನುದಾನವನ್ನು ಒದಗಿಸಲು ನಿರಾಕರಿಸಿತು. ಇದಲ್ಲದೇ ಪೆರಿಫೆರಲ್ ರಿಂಗ್ ರಸ್ತೆಗೆ 3,000 ಕೋಟಿ ಹಾಗೂ ಕೆರೆಗಳ ಅಭಿವೃದ್ಧಿಗೆ 3,000 ಕೋಟಿ ನೀಡಬೇಕೆಂದು ಶಿಫಾರಸ್ಸು ಮಾಡಿತ್ತು. ಎರಡೂ ಸೇರಿ 11,495 ಕೋಟಿ ರೂ.ಗಳನ್ನು ಒದಗಿಸಬೇಕೆಂದು 15ನೇ ಹಣಕಾಸಿನ ಆಯೋಗವು ಶಿಫಾರಸ್ಸು ಮಾಡಿತ್ತು. ಈ ಹಣ ಬಂದಿಲ್ಲ. ಬೆಂಗಳೂರು ನಗರ ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ನಮ್ಮ ಮನವಿಯಲ್ಲಿ ಕೋರಿರುವಂತೆ ಅನುದಾನವನ್ನು ಒದಗಿಸದೇ ಹೋದರೆ ಬೆಂಗಳೂರು ಅಭಿವೃದ್ಧಿಗೆ 1ಲಕ್ಷದ 15 ಸಾವಿರ ಕೋಟಿ ರೂ.ಗಳನ್ನು ಒದಗಿಸಬೇಕು ಎಂದು ಕೋರಿರುವುದಾಗಿ ತಿಳಿಸಿದರು.

ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಅನುದಾನಕ್ಕೆ ಒತ್ತಾಯ: ಕಲ್ಯಾಣ ಕರ್ನಾಟಕದಲ್ಲಿ ಏಳು ಜಿಲ್ಲೆಗಳನ್ನು ಒಳಗೊಂಡಿದ್ದು 5 ಜಿಲ್ಲೆಗಳ ವಾರ್ಷಿಕ ವರಮಾನವು ರಾಜಸ್ಥಾನ, ಬಿಹಾರ, ಉತ್ತರ ಪ್ರದೇಶ, ಒರಿಸ್ಸಾ ಮತ್ತು ಪಶ್ಚಿಮ ಬಂಗಾಳದ ಸರಿಸಮಾನವಿದೆ. ಮಲೆನಾಡು ಪ್ರದೇಶಗಳಲ್ಲಿ ನಮಗೆ ಪ್ರವಾಹ, ಭೂ ಕುಸಿತದಂತಹ ಸಮಸ್ಯೆಗಳು ತಲೆದೋರುತ್ತವೆ. ಅದ್ದರಿಂದ ವಿಶೇಷ ಅನುದಾನ ಒದಗಿಸಬೇಕು ಎಂದು ಕೋರಿದೇವೆ ಎಂದರು.

ಕೇರಳ, ತಮಿಳುನಾಡಿಗೂ ನಮ್ಮಷ್ಟೇ ನಷ್ಟವಾಗಿದ್ದರೂ, ಅವರಿಗೆ ರಾಜಸ್ವ ಕೊರತೆ ಅನುದಾನವನ್ನು ನೀಡಲಾಗಿದೆ. ನಮಗೇಕೆ ಕೊಟ್ಟಿಲ್ಲ ಎಂದು ಪ್ರಶ್ನಿಸಲಾಗಿದೆ. ಜನಸಂಖ್ಯೆ ಆಧಾರದ ಮೇಲೆ ಅನುದಾನ ಹಂಚಿಕೆ ಮಾಡಬಾರದು ಎಂದು ನಾವು ಹೇಳುವುದಿಲ್ಲ. ಆದರೆ ತೆರಿಗೆ ಹಂಚಿಕೆ ವೈಜ್ಞಾನಿಕವಾಗಿ ಮಾಡಬೇಕು ಎಂದು ಕೋರಲಾಗಿದೆ. ಈ ಬಗ್ಗೆ ಇತರೆ ರಾಜ್ಯಗಳು ಧ್ವನಿ ಎತ್ತಿವೆ. ಸಭೆಯು ಒಂದೂ ಕಾಲ ಗಂಟೆಗಳ ಕಾಲ ಸೌಹಾರ್ದಯುತವಾಗಿ ನಡೆದಿದ್ದು, ಆಯೋಗದ ಅಧ್ಯಕ್ಷರು ನಮ್ಮ ಸಲಹೆಗಳನ್ನು ಸ್ವೀಕರಿಸಿದ್ದಾರೆ. ನಮ್ಮ ಕೋರಿಕೆಗಳನ್ನು ಈಡೇರಿಸುತ್ತಾರೆ ಎನ್ನುವ ಭರವಸೆ ಹೊಂದಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿದರು.

## ವಿಮಾನ ದುರಂತದಿಂದ ನಾವೆಲ್ಲರೂ ತೀವ್ರ ಆಘಾತಗೊಂಡಿದ್ದೇವೆ:

# ಅಹಮದಾಬಾದ್‌ಗೆ ಭೇಟಿ ನೀಡಿದ ಬಳಿಕ ಪ್ರಧಾನಿ ಮೋದಿ ಪ್ರತಿಕ್ರಿಯೆ

ಅಹಮದಾಬಾದ್ ಜೂ 13– 265 ಜನರು ಪ್ರಾಣ ಕಳೆದುಕೊಂಡ ಏರ್ ಇಂಡಿಯಾ ಎಐ 171 ವಿಮಾನ ಅಪಘಾತದ ಸ್ಥಳಕ್ಕೆ ಇಂದು ಶುಕ್ರವಾರ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಇಲ್ಲಿನ ನಾಗರಿಕ ಆಸ್ಪತ್ರೆಯಲ್ಲಿ ಗಾಯಗೊಂಡವರನ್ನು ಭೇಟಿ ಮಾಡಿ ಯೋಗಕ್ಷೇಮ ವಿಚಾರಿಸಿದರು.



ಅಪಘಾತದ ಸ್ಥಳಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳನ್ನು ಭೇಟಿ ಮಾಡಿದ ಮೋದಿ, ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿ, ಅಹಮದಾಬಾದ್‌ನಲ್ಲಿ ನಡೆದ ವಿಮಾನ ದುರಂತದಿಂದ ನಾವೆಲ್ಲರೂ ತೀವ್ರ ಆಘಾತಗೊಂಡಿದ್ದೇವೆ. ಇಷ್ಟೊಂದು ಹಠಾತ್ ಮತ್ತು ಹೃದಯವಿದ್ರಾವಕ ರೀತಿಯಲ್ಲಿ ಹಲವಾರು ಜೀವಗಳನ್ನು ಕಳೆದುಕೊಂಡಿರುವುದು ಪದಗಳಿಗೆ ನಿಲುಕದಷ್ಟು ದೊಡ್ಡ ದುರಂತ. ಎಲ್ಲಾ ದುಃಖಿತ ಕುಟುಂಬಗಳಿಗೆ ಸಂತಾಪಗಳು" ಎಂದು ಬರೆದುಕೊಂಡಿದ್ದಾರೆ.

ತಮ್ಮವರನ್ನು ಕಳೆದುಕೊಂಡವರ ನೋವು ನಮಗೆ ಅರ್ಥವಾಗುತ್ತದೆ. ವರ್ಷಗಳವರೆಗೆ ಈ ಆಘಾತ ನಮ್ಮನ್ನು ಕಾಡಲಿದೆ ಎಂದಿದ್ದಾರೆ.

ನಿನ್ನೆ ಮಧ್ಯಾಹ್ನ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಮೇಘನಿನಗರ ಪ್ರದೇಶದ ಬಿಜೆ ವೈದ್ಯಕೀಯ ಕಾಲೇಜಿನ ಸಂಕೀರ್ಣಕ್ಕೆ ಬೋಯಿಂಗ್ 787 ಡ್ರೀಮ್‌ಲೈನರ್ ವಿಮಾನ (ಎಐ171) ಅಪ್ಪಳಿಸಿದ ಸ್ಥಳವನ್ನು ಇಂದು ಪ್ರಧಾನಿ ಸುಮಾರು 20 ನಿಮಿಷಗಳ ಕಾಲ ಪರಿಶೀಲಿಸಿದರು.

ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ನಾಗರಿಕ ವಿಮಾನಯಾನ ಸಚಿವ ಕಿಂಜರಪು ರಾಮ್ ಮೋಹನ್ ನಾಯ್ಡು ಮತ್ತು ಗುಜರಾತ್ ಗೃಹ ಸಚಿವ ಹರ್ಷ ಸಾಂಘವಿ ಅವರು ವಿಮಾನ ಕಾಲೇಜು ಹಾಸ್ಟೆಲ್ ಹೇಗೆ ಅಪ್ಪಳಿಸಿತು ಎಂಬುದರ ಬಗ್ಗೆ ಮೋದಿಗೆ ವಿವರಿಸಿದರು.

ನಂತರ ಪ್ರಧಾನಿಯವರು ನಗರದ ಸಿವಿಲ್ ಆಸ್ಪತ್ರೆಗೆ ತೆರಳಿ ಅಪಘಾತದಲ್ಲಿ ಗಾಯಗೊಂಡವರನ್ನು ಭೇಟಿಯಾದರು. ಒಂದು ದಿನದ ಹಿಂದೆ ನಡೆದ ಅಪಘಾತದಲ್ಲಿ ಪವಾಡಸದೃಶವಾಗಿ ಬದುಕುಳಿದ ಏಕೈಕ ಪ್ರಯಾಣಿಕ ವಿಶ್ವಶ್‌ಕುಮಾರ್ ರಮೇಶ್ ಅವರನ್ನು ಭೇಟಿಯಾದರು.

25 ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಆಸ್ಪತ್ರೆಯ ಸಿ7 ವಾರ್ಡ್‌ಗೆ ಅವರು ಭೇಟಿ ನೀಡಿ ವೈದ್ಯರೊಂದಿಗೆ ಸಂವಾದ ನಡೆಸಿದರು. ಪ್ರಧಾನಿಯವರು ಆಸ್ಪತ್ರೆಯಲ್ಲಿ ಸುಮಾರು 10 ನಿಮಿಷಗಳ ಕಾಲ ಕಳೆದರು.

ಮೋದಿ ಅವರು ಅಹಮದಾಬಾದ್ ವಿಮಾನ ನಿಲ್ದಾಣದ ಬಳಿಯ ಗುಜ್‌ಸೈಲ್ ಕಚೇರಿಯಲ್ಲಿ ರಾಜ್ಯ ಮತ್ತು ನಾಗರಿಕ ವಿಮಾನಯಾನ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

**ಸ್ವಚ್ಛಗೊಳಿಸುವ ಕಾರ್ಯ**

ಅಪಘಾತದ ಸ್ಥಳವನ್ನು ತೆರವುಗೊಳಿಸುವ ಕಾರ್ಯಾಚರಣೆ ರಾತ್ರಿಯಿಡೀ ಮುಂದುವರೆದಿದ್ದು, ಕೊನೆಯ ಹಂತದಲ್ಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪೊಲೀಸ್ ಉಪ ಆಯುಕ್ತ ಕಾನನ್ ದೇಸಾಯಿ ಅವರು ಸ್ಥಳವನ್ನು ತೆರವುಗೊಳಿಸುವ ಕಾರ್ಯಾಚರಣೆ ರಾತ್ರಿಯಿಡೀ ಮುಂದುವರೆದಿದ್ದು, ಕೆಲವು ಅವಶೇಷಗಳನ್ನು ಇನ್ನೂ ತೆಗೆದುಹಾಕಬೇಕಾಗಿದೆ ಎಂದು ಹೇಳಿದರು. ಶವಗಳು ಗುರುತಿಸಲಾಗದಷ್ಟು ಸುಟ್ಟುಹೋಗಿವೆ ಎಂದು ಅವರು ಹೇಳಿದರು.

**ಇನ್ನೂ ಪತ್ತೆಯಾಗದ ವಿಮಾನ ಕಪ್ಪು ಪೆಟ್ಟಿಗೆ**

265 ಶವಗಳನ್ನು ಸಿಟಿ ಸಿವಿಲ್ ಆಸ್ಪತ್ರೆಗೆ ಕಳುಹಿಸಲಾಗಿದೆ ಎಂದು ಕಾನನ್ ದೇಸಾಯಿ ಈ ಹಿಂದೆ ಹೇಳಿದ್ದರು. ಏರ್ ಇಂಡಿಯಾ ವಿಮಾನದ ಕಪ್ಪು ಪೆಟ್ಟಿಗೆಯನ್ನು ಇನ್ನೂ ಪತ್ತೆ ಮಾಡಿಲ್ಲ, ತನಿಖಾಧಿಕಾರಿಗಳು ವಿಮಾನ ಮತ್ತು ಕಾಕ್‌ಪಿಟ್ ರೆಕಾರ್ಡರ್‌ಗಳು ಕಾರಣವನ್ನು ಅರ್ಥಮಾಡಿಕೊಳ್ಳುವಲ್ಲಿ ಪ್ರಮುಖವಾಗಿವೆ ಎಂದು ಹೇಳಿದ್ದಾರೆ.



# SSLC ಪರೀಕ್ಷೆ-2ರ ಫಲಿತಾಂಶ ಪ್ರಕಟ



ಬೆಂಗಳೂರು ಜೂ 13- ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್ಸಿ ಪರೀಕ್ಷೆ-2ರ ಫಲಿತಾಂಶ ಪ್ರಕಟವಾಗಿದ್ದು, ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿರುವುದು ಶ್ಲಾಘನೀಯ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರು ಸಂತಸ ವ್ಯಕ್ತಪಡಿಸಿದ್ದಾರೆ. ಈ ಫಲಿತಾಂಶವು ರಾಜ್ಯ ಸರ್ಕಾರ ಜಾರಿಗೆ ತಂದಿರುವ ಮೂರು ಪರೀಕ್ಷಾ ಪದ್ಧತಿಯ ಯಶಸ್ಸಿಗೆ ಸಾಕ್ಷಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಚಿವರು ಮಾತನಾಡಿ, 2025ರ ಎಸ್‌ಎಸ್‌ಎಲ್ಸಿ ಪರೀಕ್ಷೆ-2ರಲ್ಲಿ ಸರ್ಕಾರಿ ಶಾಲೆಗಳ ಉತ್ತೀರ್ಣತಾ ಪ್ರಮಾಣ ಶೇ. 36.65 ಇದ್ದು, ಇದು ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಫಲಿತಾಂಶಕ್ಕಿಂತ ಹೆಚ್ಚಾಗಿದೆ. ಇದು ನಮ್ಮ ಸರ್ಕಾರಿ ಶಾಲೆಗಳ ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಕಠಿಣ ಪರಿಶ್ರಮಕ್ಕೆ ಸಿಕ್ಕ ಪ್ರತಿಫಲವಾಗಿದೆ ಎಂದು ಹೇಳಿದರು.

ಎಸ್‌ಎಸ್‌ಎಲ್ಸಿ ಪರೀಕ್ಷೆಯಂತೆ, ಈ ಹಿಂದೆ ನಡೆಸಿದ ಪಿಯುಸಿ ಪರೀಕ್ಷೆ-2 ಕೂಡ ವಿದ್ಯಾರ್ಥಿಗಳಿಗೆ ತಮ ಮುಂದಿನ ವ್ಯಾಸಂಗವನ್ನು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿಯೇ ಮುಂದುವರಿಸಲು ನೆರವಾಗಿದೆ. ವಿದ್ಯಾರ್ಥಿಗಳಿಗೆ ಎರಡನೇ ಅವಕಾಶ ನೀಡುವುದರಿಂದ ಅವರ ಭವಿಷ್ಯಕ್ಕೆ ಯಾವುದೇ ತಡೆಯಾಗುವುದಿಲ್ಲ ಎಂಬುದು ನಮ್ಮ ಸರ್ಕಾರದ ದೃಢ ನಂಬಿಕೆ ಎಂದು ಸಚಿವರು ಒತ್ತಿ ಹೇಳಿದರು. ವಿದ್ಯಾರ್ಥಿಗಳ ಭವಿಷ್ಯವನ್ನು ಉತ್ತಮಗೊಳಿಸಲು ಮತ್ತು ಅವರಲ್ಲಿನ ಪರೀಕ್ಷಾ ಭಯವನ್ನು ಹೋಗಲಾಡಿಸಲು ನಾವು ಜಾರಿಗೆ ತಂದಿರುವ ಮೂರು ಪರೀಕ್ಷಾ ಪದ್ಧತಿ ಉತ್ತಮ ಫಲಿತಾಂಶ ನೀಡಿದೆ. ಈ ಪದ್ಧತಿಯಿಂದಾಗಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ತಮ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಲು ಸಾಧ್ಯವಾಗಿದೆ ಎಂದು ನುಡಿದರು.

2025ರ ಎಸ್‌ಎಸ್‌ಎಲ್ಸಿ ಪರೀಕ್ಷೆ-2ರಲ್ಲಿ 11,818 ವಿದ್ಯಾರ್ಥಿಗಳು ಫಲಿತಾಂಶ ಉತ್ತಮಪಡಿಸಿಕೊಳ್ಳಲು ನೋಂದಾಯಿಸಿದ್ದು, ಅವರಲ್ಲಿ 6,635 ವಿದ್ಯಾರ್ಥಿಗಳು (ಶೇ. 56.14) ತಮ ಫಲಿತಾಂಶವನ್ನು ಉತ್ತಮಪಡಿಸಿಕೊಂಡಿರುವುದು ಈ ಪದ್ಧತಿಯ ಸಕಾರಾತಕ ಪರಿಣಾಮವನ್ನು ತೋರಿಸುತ್ತದೆ. ಅಲ್ಲದೆ, ಎಸ್‌ಎಸ್‌ಎಲ್ಸಿ ಪರೀಕ್ಷೆ-2ರಲ್ಲಿ ನಾಲ್ಕು ವಿದ್ಯಾರ್ಥಿಗಳು 625ಕ್ಕೆ 625 ಅಂಕಗಳನ್ನು ಗಳಿಸಿ ಶೇ. 100ರಷ್ಟು ಫಲಿತಾಂಶ ಪಡೆದಿರುವುದು ಹೆಮೆಯ ಸಂಗತಿ. ಈ ನಾಲ್ಕು ವಿದ್ಯಾರ್ಥಿಗಳಲ್ಲಿ ಒಬ್ಬರು ಸರ್ಕಾರಿ ಶಾಲೆಯ ವಿದ್ಯಾರ್ಥಿಯಾಗಿದ್ದಾರೆ.

2025ರ ಪರೀಕ್ಷೆ-2ರ ಅವಕಾಶದಿಂದ ಒಟ್ಟು 87,330 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಅವರಿಗೆ ಪ್ರಸಕ್ತ ವರ್ಷದಲ್ಲಿಯೇ ಮುಂದಿನ ವ್ಯಾಸಂಗ ಮುಂದುವರಿಸಲು ಅನುಕೂಲವಾಗಿದೆ. ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಮುಖ್ಯಶಿಕ್ಷಕರ ಸತತ ಪ್ರಯತ್ನದಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪರೀಕ್ಷೆ-2ಕ್ಕೆ ನೋಂದಾಯಿಸಿಕೊಂಡು ಹಾಜರಾಗಿದ್ದಾರೆ. ಫಲಿತಾಂಶ ಪೂರ್ಣಗೊಳಿಸದ ವಿದ್ಯಾರ್ಥಿಗಳಿಗೆ ಶಾಲಾ ಹಂತದಲ್ಲಿ ಪರಿಹಾರ ಬೋಧನಾ ತರಗತಿಗಳನ್ನು ನಡೆಸಿದ್ದು, ಇದು ಫಲಿತಾಂಶ ಸುಧಾರಣೆಗೆ ಸಹಕಾರಿಯಾಗಿದೆ.

ಪರೀಕ್ಷಾ ಅಕ್ರಮಗಳನ್ನು ತಡೆಯಲು ಸಿಸಿಟಿವಿ ಕ್ಯಾಮೆರಾದ ಮೂಲಕ ವೆಬ್‌ಕಾಸ್ಟಿಂಗ್ ಪದ್ಧತಿಯನ್ನು ಮುಂದುವರಿಸಲಾಗಿದ್ದು, ಇದು ಪರೀಕ್ಷಾ ವ್ಯವಸ್ಥೆಯ ಸಮಗ್ರತೆಯನ್ನು ಪುನರ್ ಸ್ಥಾಪಿಸಲು ಸಹಾಯ ಮಾಡಿದೆ ಎಂದು ತಿಳಿಸಿದರು. ಅಜೀಂ ಪ್ರೇಮ್‌ಜಿ ಸಂಸ್ಥೆಯ ಸಿ.ಇ.ಓ. ಅನುರಾಗ್ ಬೆಹರ್ ಅವರು ಕರ್ನಾಟಕದಲ್ಲಿ ಜಾರಿಗೆ ತಂದಿರುವ ಮೂರು ಪರೀಕ್ಷಾ ಪದ್ಧತಿ, ವೆಬ್ ಕಾಸ್ಟಿಂಗ್ ದೇಶಕ್ಕೆ ಮಾದರಿ, ಪ್ರತಿಭಾವಂತರನ್ನು ರೂಪಿಸಲು ಪರೀಕ್ಷಾ ಭಯ ಹೋಗಲಾಡಿಸಲು ಸಹಕಾರಿಯಾಗಿವೆ ಎಂದು ನೀಡಿರುವ ಹೇಳಿಕೆಯು ನಮ ಸರ್ಕಾರದ ಶೈಕ್ಷಣಿಕ ಸುಧಾರಣೆಗಳಿಗೆ ಸಿಕ್ಕ ಮನ್ನಣೆಯಾಗಿದೆ ಎಂದು ಹೇಳಿದರು.

ಪರೀಕ್ಷೆ-1 ಮತ್ತು ಪರೀಕ್ಷೆ-2ರಲ್ಲಿ ಫಲಿತಾಂಶ ಪೂರ್ಣಗೊಳಿಸದ ವಿದ್ಯಾರ್ಥಿಗಳಿಗೆ, ಫಲಿತಾಂಶ ಉತ್ತಮಪಡಿಸಿಕೊಳ್ಳಲು ಬಯಸುವ ಅಭ್ಯರ್ಥಿಗಳಿಗೆ ಮತ್ತು ಪುನರಾವರ್ತಿತ ಅಭ್ಯರ್ಥಿಗಳಿಗೆ ಪರೀಕ್ಷೆ-3ನ್ನು ದಿನಾಂಕ 05-07-2025 ರಿಂದ 12-07-2025 ವರೆಗೆ ನಡೆಸಲಾಗುವುದು ಎಂದು ಪ್ರಕಟಿಸಿದರು. ಅಲ್ಲದೆ, 2024-25ರ ಪರೀಕ್ಷೆ -2 ರಲ್ಲಿ ಫಲಿತಾಂಶ ಪಡೆದಿರುವ ಶಾಲಾ ಅಭ್ಯರ್ಥಿಗಳಿಗೆ ಪರೀಕ್ಷೆ-3ಕ್ಕೆ ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ನೀಡಲಾಗಿದೆ. ಆದರೆ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಬಯಸುವ ಅಭ್ಯರ್ಥಿಗಳು, ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳು ನಿಗದಿತ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. 3ನೇ ಪರೀಕ್ಷೆಗೂ ಸಹ ಪರಿಹಾರ ಬೋಧನಾ ತರಗತಿಗಳನ್ನು ನಡೆಸಲಾಗುವುದು.

ಶಾಲೆಗಳ ಕ್ರೋಢೀಕೃತ ಫಲಿತಾಂಶ ಪಟ್ಟಿ ಹಾಗೂ ತಾತ್ಕಾಲಿಕ ಅಂಕಪಟ್ಟಿಯನ್ನು ಮಂಡಳಿಯ https://kseab.karnataka.gov.in ವೆಬ್‌ಸೈಟ್‌ನಲ್ಲಿ ಇದೇ 13ರಂದು 2 ಹಂತದಲ್ಲಿ ಅಂದೇ ಮುದ್ರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಪರೀಕ್ಷಾ ಫಲಿತಾಂಶವನ್ನು ಪ್ರೌಢಶಾಲೆಗಳಲ್ಲಿ ಆ ದಿನವೇ ಪ್ರಕಟಿಸಲಾಗುವುದು. ಸರ್ಕಾರವು ವಿದ್ಯಾರ್ಥಿ ಕೇಂದ್ರಿತ ಶೈಕ್ಷಣಿಕ ಸುಧಾರಣೆಗಳನ್ನು ಮುಂದುವರಿಸಲು ಬದ್ಧವಾಗಿದೆ ಎಂದು ಮಧು ಬಂಗಾರಪ್ಪ ಅವರು ಪುನರುಚ್ಚರಿಸಿದರು.

# ಮುಂಗಾರು ಮಳೆಯ ಅಬ್ಬರಕ್ಕೆ ಉತ್ತರಕರ್ನಾಟಕ ತತ್ತರ




ಹುಬ್ಬಳ್ಳಿ/ಚಿಕ್ಕಮಗಳೂರು ಜೂ 13- ಮುಂಗಾರು ಮಳೆಯ ಅಬ್ಬರಕ್ಕೆ ಉತ್ತರಕರ್ನಾಟಕ ತತ್ತರಗೊಂಡಿದೆ. ಮಲೆನಾಡು ಕರಾವಳಿ ಭಾಗದಲ್ಲಿ ಮುಂಗಾರು ಮಳೆ ಜೋರಾಗಿದ್ದು, ಹಳ್ಳಕೊಳ್ಳಗಳು ತುಂಬಿ, ನದಿಗಳು ಉಕ್ಕಿಹರಿಯುತ್ತಿವೆ. ಹುಬ್ಬಳ್ಳಿ-ಧಾರವಾಡ ಅವಳಿ ನಗರದಲ್ಲಿ ಭಾರೀ ಮಳೆಗೆ ಇಬ್ಬರು ಸಾವನ್ನಪ್ಪಿದ್ದಾರೆ. ಗೋಕಾಕ್‌ನಲ್ಲಿ ಒಬ್ಬರು ಬಲಿಯಾಗಿದ್ದಾರೆ. ಉತ್ತರ ಕನ್ನಡ, ಚಿಕ್ಕಮಗಳೂರು, ಉಡುಪಿ, ಕೊಡಗು ಜಿಲ್ಲೆಗಳಲ್ಲಿ ನಿರಂತರ ಮಳೆ ಸುರಿಯುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

ಉತ್ತರ ಕರ್ನಾಟಕದ ಹಲವು ಭಾಗಗಳಲ್ಲಿ ನದಿಗಳು ಉಕ್ಕಿ ಹರಿದು, ಹೊಲಗದ್ದೆಗಳು ಜಲಾವೃತಗೊಂಡಿವೆ. ಬೆಣ್ಣೆಹಳ್ಳ ತುಂಬಿ ಹರಿದ ಪರಿಣಾಮ ಹಲವು ಗ್ರಾಮಗಳಿಗೆ ನೀರು ನುಗ್ಗಿ ಜನ ಮನೆಯಿಂದ ನೀರನ್ನು ಹೊರಹಾಕುವಲ್ಲಿ ಹರಸಾಹಸ ಪಡುತ್ತಿದ್ದಾರೆ. ಕಾರವಾರ, ಗದಗ ನಗರಗಳಲ್ಲೂ ಕೂಡ ಭಾರೀ ಮಳೆ ಬಿದ್ದ ಪರಿಣಾಮ ರಸ್ತೆಗಳೆಲ್ಲಾ ಜಲಾವೃತಗೊಂಡಿವೆ. ಹೊಲಗದ್ದೆಗಳಿಗೆ ನೀರು ನುಗ್ಗಿದೆ. ಹಲವು ಮನೆಗಳು ಕುಸಿತವಾಗಿವೆ. ನೂರಾರು ಎಕರೆಯಲ್ಲಿದ್ದ ಬೆಳೆ ನಾಶವಾಗಿದೆ.

ಹಲವೆಡೆ ರಸ್ತೆ ಸಂಪರ್ಕ ಕಡಿತಗೊಂಡಿದೆ. ನಿನ್ನೆ ಹುಬ್ಬಳ್ಳಿ ನೇಕಾರ ನಗರದಲ್ಲಿ ಮಳೆಯಲ್ಲಿ ಬೈಕ್ ಸವಾರ ಹುಸೇನ್ ಕೊಚ್ಚಿ ಹೋಗಿ ಸಾವನ್ನಪ್ಪಿದ್ದು, ಹಿಂಬದಿ ಸವಾರನನ್ನು ರಕ್ಷಿಸಲಾಗಿದೆ. ಹುಬ್ಬಳ್ಳಿಯಾದ್ಯಂತ ಭಾರೀ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡಿದೆ. ಹುಬ್ಬಳ್ಳಿ ತಾಲ್ಲೂಕಿನ ಹಲವೆಡೆ ರಸ್ತೆ ಸಂಪರ್ಕ ಕಡಿತಗೊಂಡಿದ್ದು, ಸಾವಿರಾರು ಎಕರೆ ಜಮೀನು ಜಲಾವೃತಗೊಂಡು ಬೆಳೆ ನಷ್ಟ ಉಂಟಾಗಿದೆ.

ಆರಂಭದಲ್ಲಿ ಮುಂಗಾರುಮಳೆ ಅಬ್ಬರಿಸುತ್ತಿದ್ದು, ಉತ್ತರ ಕನ್ನಡ, ಕರಾವಳಿ, ಮಧ್ಯಕರ್ನಾಟಕ ಭಾಗದಲ್ಲಿ ಭಾರೀ ಮಳೆಯಾಗುತ್ತಿದೆ. ಇನ್ನು ಒಂದು ವಾರ ಕಾಲ ಭಾರೀ ಮಳೆಯ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದ್ದು, ಮುನ್ನೆಚ್ಚರಿಕೆ ಕ್ರಮ ವಹಿಸುವಂತೆ ಸೂಚಿಸಲಾಗಿದೆ.

# ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಪುಟ ಸೇರಿದ ಮದ್ದೂರಿನ ಅಣ್ಣೂರು ಗ್ರಾಮ ಪಂಚಾಯಿತಿ

ಮಂಡ್ಯ ಜೂ 13- ರಾಷ್ಟ್ರೀಯ ಪಂಚಾಯತ್ ರಾಜ್ ದಿನದ ಅಂಗವಾಗಿ ಏಕಕಾಲದಲ್ಲಿ ಗರಿಷ್ಠ ಸಂಖ್ಯೆಯ ರಂಗೋಲಿಗಳನ್ನು ಬಿಡಿಸಿ ದಾಖಲೆ ನಿರ್ಮಿಸಿದ ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಅಣ್ಣೂರು ಗ್ರಾಮ ಪಂಚಾಯಿತಿ ಸಾಧನೆ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಸೇರ್ಪಡೆಯಾಗಿದೆ.

ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುತ್ತಾ ಗಮನ ಸೆಳೆದಿರುವ ಅಣ್ಣೂರು ಗ್ರಾಮ ಪಂಚಾಯಿತಿ ಮುಕುಟಕ್ಕೆ ಈ ಮೂಲಕ ಮತ್ತೊಂದು ಗರಿ ಸೇರಿದೆ. ಮಹಿಳಾ ಸಶಕ್ತೀಕರಣ ಹಾಗೂ ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಸಲುವಾಗಿ 2025ರ ಏಪ್ರಿಲ್ 27ರಂದು ರಂಗೋಲಿ ರಚಿಸುವ ಚಟುವಟಿಕೆಯನ್ನು ಅಣ್ಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ 3 ಗ್ರಾಮಗಳಲ್ಲಿ ಏಕಕಾಲದಲ್ಲಿ ಆಯೋಜಿಸಲಾಗಿತ್ತು.




ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಣ್ಣೂರು, ಆಲಭುಜನಹಳ್ಳಿ ಕಾರ್ಕಳ್ಳಿ ಗ್ರಾಮಗಳಿಂದ ಒಟ್ಟು 1,544 ಮಂದಿ ಭಾಗವಹಿಸಿದ್ದರು. ಅಕ್ಕಿ ಹಿಟ್ಟು, ಅರಿಶಿನ ಪುಡಿ ಮತ್ತು ಬಣ್ಣದ ಮರಳಿನಂತಹ ನೈಸರ್ಗಿಕ ವಸ್ತುಗಳನ್ನು ಬಳಸಿಕೊಂಡು ಒಟ್ಟಾರೆ 1,418 ರಂಗೋಲಿಗಳನ್ನು ರಚಿಸಿ ಗಮನ ಸೆಳೆದಿದ್ದರು. ಇದರಲ್ಲಿ ಅಣ್ಣೂರು ಗ್ರಾ.ಪಂ.ನ 818 ಮಂದಿ 728 ರಂಗೋಲಿ, ಆಲಭೂಜನಹಳ್ಳಿಯ 373 ಮಂದಿ 373 ಹಾಗೂ ಕಾರ್ಕಹಳ್ಳಿಯ 353 ಮಂದಿ 317 ರಂಗೋಲಿಗಳನ್ನು ರಚಿಸಿದ್ದರು.

"ಅಣ್ಣೂರು ಗ್ರಾ.ಪಂ. ಹಲವು ರಾಷ್ಟ್ರೀಯ, ರಾಜ್ಯ ಮತ್ತು ಸಂಘ-ಸಂಸ್ಥೆಗಳು ನೀಡಿದ ಪ್ರಶಸ್ತಿಗಳನ್ನು ಪಡೆದುಕೊಂಡು ಗಮನ ಸೆಳೆದಿದೆ. ಮಹಿಳೆಯರ ಸಕ್ರಿಯ ಭಾಗವಹಿಸುವಿಕೆಯಿಂದ ಈ ಸಾಧನೆ ಆಗಿರುವುದಕ್ಕೆ ಹೆಚ್ಚು ಖುಷಿಯಾಗಿದೆ. ಇದಕ್ಕೆ ಹಿರಿಯ ಅಧಿಕಾರಿಗಳು, ಗ್ರಾಮ ಪಂಚಾಯತಿಯ ಚುನಾಯಿತ ಸದಸ್ಯರು ಮತ್ತು ಆಡಳಿತ ಮಂಡಳಿ ಸಹಕಾರ ಕಾರಣ" ಎಂದು ಅಣ್ಣೂರು ಗ್ರಾಮ ಪಂಚಾಯಿತಿ ಪಿಡಿಓ ಅಶ್ವಿನಿ ಹೇಳಿದ್ದಾರೆ.

ಜನವಾದಿ
ಜಾಹೀರಾತಿಗಾಗಿ
ಸಂಪರ್ಕಿಸಿ:
9448300139

# ವ್ಯಕ್ತಿ ಕಾಣೆ ಪತ್ತೆಗೆ ಮನವಿ

ಜನವಾದಿ ವಾರ್ತೆ



ಮಾನ್ವಿ ಜೂ 13- ತಾಲೂಕಿನ ಕರೆಗುಡ್ಡ ಗ್ರಾಮದಿಂದ ಏ.9 ರಂದು ಸಂಜೆ 5 ಕ್ಕೆ ಮುಶಿಲೆಪ್ಪ 40 ವರ್ಷ ಗ್ರಾಮದ ತಮ್ಮ ಮನೆಯಿಂ ದ ಹೊರಗಡೆ ಹೋದವರು ಇದುವರೆಗೂ ಮನೆಗೆ ವಾಪಸಗಾದೆ ಇರುವುದರಿಂದ ಮಾನ್ವಿ ಪೊಲೀಸ್ ಠಾಣೆಯಲ್ಲಿ ಏ.25 ರಂದು ತಂದೆ ಪತ್ನಿ ಕವಿತಾ ನೀಡಿದ ದೂರನ್ನು ದಾಖಲಿಸಿಕೊಳ್ಳಲಾಗಿದ್ದು ಕಾಣೆಯಾದ ವ್ಯಕ್ತಿಯ ಕುರಿತು ಯಾರಿಗದರು ಮಾಹಿತಿ ದೊರೆತಲ್ಲಿ ಮಾನ್ವಿ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ವ್ಯಕ್ತಿ ಕಾಣೆ ಪತ್ತೆಗೆ ಮನವಿ

ಜನವಾದಿ ವಾರ್ತೆ



ಮಾನ್ವಿ ಜೂ 13- ಪಟ್ಟಣದ ಬಸವ ನಗರದ ನಿವಾಸಿ ಹಾಗೂ ವ್ಯಾಪಾರಿ ಜಿ.ಶಿವರಾಮಕೃಷ್ಣ ವ.39 ವರ್ಷ ಇವರು ಕುಟುಂಬ ಕಲಹದಿಂದಾಗಿ ಜೂ.1 ರಂದು ಮನೆಯಲ್ಲಿನ ಕಾರಿನೊಂದಿಗೆ ಹೋರಾಟಿದ್ದು ಇದುವರೆಗೂ ಮನೆಗೆ ವಾಪಸಗಾದೆ ಇರುವುದರಿಂದ ಮಾನ್ವಿ ಪೊಲೀಸ್ ಠಾಣೆಯಲ್ಲಿ ಜೂ.3 ರಂದು ತಂದೆ ಜಿ.ವಿ.ವಿ.ಎಸ್.ಸತ್ಯನಾರಾಯಣ ಇವರು ನೀಡಿದ ದೂರನ್ನು ದಾಖಲಿಸಿಕೊಳ್ಳಲಾಗಿದ್ದು ಕಾಣೆಯಾದ ವ್ಯಕ್ತಿಯ ಕುರಿತು ಯಾರಿಗದರು ಮಾಹಿತಿ ದೊರೆತ್ತಲ್ಲಿ ಮಾನ್ವಿ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜೂನ್ 18ರಂದು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ, ಚಿತ್ರಕಲಾ ಸ್ಪರ್ಧೆ

ಜನವಾದಿ ವಾರ್ತೆ

ರಾಯಚೂರು ಜೂ 12 - ಇಲ್ಲಿನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ವಿಶ್ವ ಪರಿಸರ ದಿನಾಚರಣೆ-2025ರ ಅಂಗವಾಗಿ ಜೂನ್ 18ರ ಬೆಳಿಗ್ಗೆ 11ಗಂಟೆಗೆ ನಗರದ ಕನ್ನಡ ಭವನದಲ್ಲಿ ಪ್ರಬಂಧ ಸ್ಪರ್ಧೆ ಮತ್ತು ಚಿತ್ರಕಲಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ವಿದ್ಯಾರ್ಥಿಗಳು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು ಎಂಬ ಘೋಷವಾಕ್ಯದೊಂದಿಗೆ ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ವಸ್ತುಗಳ ಉಪಯೋಗದಿಂದಾಗುವ ಹಾನಿ ಮತ್ತು ಪರ್ಯಾಯ ವಸ್ತುಗಳ ಉಪಯೋಗ ಮಾಡುವ ಕುರಿತು ರಾಯಚೂರು ನಗರದ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಸ್ಥಳದಲ್ಲೆ ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಪ್ರತಿ ಸ್ಪರ್ಧೆಯಲ್ಲಿ ತಮ್ಮ ಪ್ರೌಢಶಾಲೆಯ 8ನೇ, 9ನೇ ಮತ್ತು 10ನೇ ತರಗತಿಗಳಿಂದ ಚಿತ್ರಕಲೆ ಸ್ಪರ್ಧೆಗೆ 03 ವಿದ್ಯಾರ್ಥಿಗಳು ಮತ್ತು ಪ್ರಬಂಧ ಸ್ಪರ್ಧೆಗೆ 03 ವಿದ್ಯಾರ್ಥಿಗಳಂತೆ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಗೆ ಪೇಪರ್ ಶೀಟ್ಸ್ ಮತ್ತು ಚಿತ್ರಕಲಾ ಸ್ಪರ್ಧೆಗೆ ಡ್ರಾಯಿಂಗ್ ಶೀಟ್ಸ್‌ಗಳನ್ನು ಮಾತ್ರ ನೀಡಲಾಗುವುದು ಹಾಗೂ ಚಿತ್ರಕಲಾ ಸ್ಪರ್ಧೆಗೆ ಬೇಕಾದ ವಸ್ತುಗಳನ್ನು ತಾವೇ ತೆಗೆದುಕೊಂಡು ಬರುವುದು. ಸ್ಪರ್ಧೆಯಲ್ಲಿ ಭಾಗವಹಿಸುವ ಶಾಲಾ ವಿದ್ಯಾರ್ಥಿಗಳು ಮಾಹಿತಿಗಾಗಿ ತಮ್ಮ ಶಾಲೆಯ ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆ ಇರುವ ಲೆಟರ್‌ಹೆಡ್‌ನೊಂದಿಗೆ ಹಾಜರಾಗುವುದು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ವಿಶ್ವ ಪರಿಸರ ದಿನಾಚರಣೆ ಸಮಾರೋಪ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನಕ್ಕೆ ಅರ್ಜಿ ಆಹ್ವಾನ

ಜನವಾದಿ ವಾರ್ತೆ

ರಾಯಚೂರು ಜೂ 12 - ಕರ್ನಾಟಕ ಜಾನಪದ ಅಕಾಡೆಮಿಯು 2024ನೇ ಸಾಲಿನಲ್ಲಿ 2024ರ ಜನವರಿ 1ರಿಂದ 2024ರ ಡಿಸೆಂಬರ್ 31ರವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ ಕನಿಷ್ಠ 150 ಪುಟಗಳಿಗೂ ಮೇಲ್ಪಟ್ಟಿರುವಂತೆ

ನಾಲ್ಕು ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನ ನೀಡುವ ಯೋಜನೆಯಡಿಯಲ್ಲಿ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಜನಪದ ಗದ್ಯ, ಜನಪದ ವಿಚಾರ-ವಿಮರ್ಶೆ ಸಂಶೋಧನೆ, ಜನಪದ ಪದ್ಯ, ಜನಪದ ಸಂಕೀರ್ಣ ಪ್ರಕಾರಗಳಿಗೆ ಆಸಕ್ತ ಲೇಖಕರು/ ಪ್ರಕಾಶಕರು/ ಸಂಪಾದಕರು ತಮ್ಮ 1 ಕೃತಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು-560002 ಇವರಿಗೆ ಜೂನ್ 30ರೊಳಗೆ ತಲುಪುವಂತೆ ಖುದ್ದಾಗಿ ಕೋರಿಯರ್ ಅಥವಾ ಅಂಚೆ ಮೂಲಕ ಕಳುಹಿಸಬಹುದಾಗಿದೆ.

ಈ ಪುಸ್ತಕವು ತಜ್ಞರಿಂದ ಪ್ರಕಾರವಾರು ಆಯ್ಕೆಯಾದಲ್ಲಿ, ನಂತರ ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಉಳಿದಂತೆ 03 ಪ್ರತಿಗಳನ್ನು ಮೌಲ್ಯಮಾಪಕರ ಪರಿಶೀಲನೆಗೆ ತರಿಸಿಕೊಳ್ಳಲಾಗುವುದು.

ವಿಶೇಷ ಸೂಚನೆ: ಈಗಾಗಲೇ ಪುಸ್ತಕ ಬಹುಮಾನ ಪಡೆದ ಸಂಪಾದಕರು ಅಥವಾ ಲೇಖಕರು ಮತ್ತೆ ಪುಸ್ತಕ ಬಹುಮಾನ ಯೋಜನೆಗೆ ಕೃತಿಗಳನ್ನು ಕಳುಹಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕವನ್ನು ನಂ.1 ಉತ್ಪಾದನಾ ವಲಯವನ್ನಾಗಿಸುವ ಗುರಿ: ಸಚಿವ ಎಂ.ಬಿ.ಪಾಟೀಲ್



ಬೆಂಗಳೂರು ಜೂ 13- ಕರ್ನಾಟಕವನ್ನು ದೇಶದಲ್ಲೇ ನಂ.1 ಉತ್ಪಾದನಾ ವಲಯವನ್ನಾಗಿ ಅಭಿವೃದ್ಧಿಪಡಿಸಲು ಹಲವು ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ತಮ ಇಲಾಖೆಯ 2 ವರ್ಷಗಳ ಸಾಧನೆ ಹಾಗೂ ಭವಿಷ್ಯದ ಪಥ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಯೆಟ್ನಾಂ ಹಾಗೂ ಇತರ ದೇಶಗಳಂತೆ ಕರ್ನಾಟಕದಲ್ಲೂ ಉತ್ಪಾದನಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

ಈಗ ನಾಲ್ಕನೇ ಸ್ಥಾನದಲ್ಲಿರುವ ರಾಜ್ಯವನ್ನು ಮೊದಲ ಸ್ಥಾನಕ್ಕೆ ಕೊಂಡೊಯ್ಯಲು ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಶ್ರೀನಿವಾಸಪುರದಲ್ಲಿ ಫಾರ್ಮಾ ಪಾರ್ಕ್, ವಿಜಯಪುರದಲ್ಲಿ ಎಲೆಕ್ಟ್ರಿಕಲ್ ಸೆಲ್ ಉತ್ಪಾದನೆ, ಚಿತ್ರದುರ್ಗದಲ್ಲಿ ಡ್ರೋನ್ ಪಾರ್ಕ್, ಹುಬ್ಬಳ್ಳಿಯಲ್ಲಿ ನವೋದ್ಯಮ ಹಾಗೂ ಭವಿಷ್ಯದ ತಾಂತ್ರಿಕ ಅಭಿವೃದ್ಧಿ, ದಾಬಸ್‌ಪೇಟೆ-ದೊಡ್ಡಬಳ್ಳಾಪುರ ನಡುವೆ ಆರೋಗ್ಯ, ಶಿಕ್ಷಣ ಸೇವೆಗಳ ಮೂಲಕ ಕ್ಲೀನ್ ಸಿಟಿ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯ ಕಡೆ ವಿಶೇಷ ಪಾರ್ಕ್ ಸೇರಿದಂತೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಹುಬ್ಬಳ್ಳಿಯ ಎನ್‌ಜಿಇಎಫ್ ಅನ್ನು ಪುನರುಜ್ಜೀವನ ಗೊಳಿಸಲಾಗುವುದು. ಎಂಎಸ್‌ಐಎಲ್‌ನ ಚಿಟ್ ಫಂಡ್ ವಹಿವಾಟನ್ನು 5 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.

ಮೈಸೂರು ಸ್ಯಾಂಡಲ್‌ನ ಕೆಎಸ್‌ಡಿಎಲ್ ವಹಿವಾಟು ಈ ತಿಂಗಳಿನಲ್ಲಿ 180 ಕೋಟಿ ರೂ. ದಾಟಿದ್ದು ಐತಿಹಾಸಿಕ ದಾಖಲೆಯಾಗಿದೆ. ಒಟ್ಟು ವಹಿವಾಟನ್ನು ಮುಂದಿನ 3 ವರ್ಷದಲ್ಲಿ 5 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸುವ ಗುರಿ ಇದೆ ಎಂದರು. ಬಂಡವಾಳ ಹೂಡಿಕೆಯಲ್ಲಿ ಗಣನೀಯ ಸಾಧನೆಯಾಗಿದೆ. 115 ಒಡಂಬಡಿಕೆಗಳಿಂದ 6,58,660 ಕೋಟಿ ರೂ. ಹೂಡಿಕೆಯಾಗಿದ್ದು, 2,32,771 ಕೋಟಿ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಇದೆ. ಏಕಗವಾಕ್ಷಿ ಅನುಮೋದನಾ ಸಮಿತಿ 1,13,200 ಕೋಟಿ ರೂ. ಹೂಡಿಕೆಯ 906 ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿದ್ದು, 2,23,982 ಉದ್ಯೋಗಗಳು ಸೃಷ್ಟಿಯಾಗುತ್ತವೆ. ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ 3,550 ಉದ್ಯೋಗಿಗಳು ಭಾಗವಹಿಸಿದ್ದು, 6,23,957 ಕೋಟಿ ರೂ.ಗಳ ಹೂಡಿಕೆಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಅದರಲ್ಲಿ 4.03 ಲಕ್ಷ ಕೋಟಿ ರೂ. ಹೂಡಿಕೆಗೆ ಅನುಮೋದನೆ ನೀಡಲಾಗಿದೆ. ಇದರಲ್ಲಿ ಶೇ.75 ರಷ್ಟು ಬೆಂಗಳೂರಿನ ಹೊರವಲಯದಲ್ಲಿದ್ದು, ಶೇ.45 ರಷ್ಟು ಉತ್ತರ ಕರ್ನಾಟಕ ಭಾಗದಲ್ಲಿ ಹೂಡಿಕೆಯಾಗುತ್ತದೆ ಎಂದರು.

ಬಂಡವಾಳ ಹೂಡಿಕೆದಾರರಿಗೆ ಉದ್ಯೋಗ ಸೃಷ್ಟಿ, ಹೂಡಿಕೆ, ಪರಿಸರ ಸ್ನೇಹಿ ಕ್ರಮಗಳನ್ನು ಆಧರಿಸಿ ವಿವಿಧ ರಿಯಾಯಿತಿ ಹಾಗೂ ಸೌಲಭ್ಯಗಳನ್ನು ನೀಡಲಾಗುತ್ತದೆ. ಕೈಗಾರಿಕಾ ಪ್ರದೇಶಗಳಿಗೆ ಸಮರ್ಪಕ ನೀರಿನ ವ್ಯವಸ್ಥೆಗಾಗಿ 3,600 ಕೋಟಿ ರೂ. ವೆಚ್ಚ ಮಾಡಲಾಗುತ್ತದೆ. 18 ಪ್ರದೇಶಗಳಲ್ಲಿ 44,165 ಎಕರೆಯಲ್ಲಿ ವಿಶೇಷ ಹೂಡಿಕೆ ವಲಯಗಳನ್ನು ಸ್ಥಾಪಿಸಲಾಗುತ್ತದೆ ಎಂದು ಹೇಳಿದರು. ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಮೂರನೇ ಸ್ಥಾನದಿಂದ ಕರ್ನಾಟಕ, 2024-25ನೇ ಸಾಲಿನಲ್ಲಿ 56 ಸಾವಿರ ಕೋಟಿ ರೂ. ಹೂಡಿಕೆಯೊಂದಿಗೆ 2ನೇ ಸ್ಥಾನಕ್ಕೇರಿದೆ. 1,65,545 ಮಿಲಿಯನ್ ಡಾಲರ್ ರಫ್ತಿನೊಂದಿಗೆ ದೇಶದಲ್ಲಿ ಪ್ರಥಮ ಸ್ಥಾನದಲ್ಲಿದ್ದೇವೆ ಎಂದು ವಿವರಿಸಿದರು.

# ರಾಜಕಾಲುವೆ ದಿಕ್ಕು ಬದಲಿಸಲು ಅವಕಾಶ ನೀಡಬೇಡಿ: ಎನ್.ಆರ್.ರಮೇಶ್



ಬೆಂಗಳೂರು ಜೂ 13- ಯಾರಿಗೂ ಉಪಕಾರ ಮಾಡಿಕೊಡುವ ಉದ್ದೇಶದಿಂದ ಸರ್ಕಾರಿ ಸ್ವತ್ತಿನಲ್ಲಿ ರಾಜಕಾಲುವೆ ದಿಕ್ಕನ್ನು ಬದಲಿಸಲು ಮುಂದಾಗಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಕೋಟ್ಯಂತರ ಮೌಲ್ಯದ ಆಸ್ತಿಯನ್ನು ಸಂರಕ್ಷಣೆ ಮಾಡುವಂತೆ ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಅವರು ಭೂ ದಾಖಲೆ ಇಲಾಖೆ ಆಯುಕ್ತರಿಗೆ ಪತ್ರ ಬರೆದು ಮನವಿ ಮಾಡಿಕೊಂಡಿದ್ದಾರೆ.

ಯಡಿಯೂರಿನ ನಾಗಸಂದ್ರ ಗ್ರಾಮದ ಸರ್ವೆ ನಂಬರ್ 36/2 ರ ಸ್ವತ್ತು ಸಂಪೂರ್ಣವಾಗಿ ಸರ್ಕಾರಿ ಖರಾಬು ಸ್ವತ್ತಾಗಿರುತ್ತದೆ. ಸದರಿ ಸ್ವತ್ತಿನ ಮಧ್ಯಭಾಗದಲ್ಲಿ ದ್ವಿತೀಯ ಹಂತದ ರಾಜಕಾಲುವೆಯು ಹಾದು ಹೋಗಿರುತ್ತದೆ.ಮೇಲೆ ತಿಳಿಸಿರುವ ಸರ್ವೆ ನಂಬರ್ 36/2 ರ ಸರ್ಕಾರಿ ಸ್ವತ್ತನ್ನು ನಕಲಿ ದಾಖಲೆಗಳ ಮೂಲಕ ಶರ್ಮಿಳ ಭಕ್ತಾರಾಂ ಎಂಬುವವರು ಕಬಳಿಸಿದ್ದಾರೆ. ಮಾತ್ರವಲ್ಲ, ಬೆಂಗಳೂರು ದಕ್ಷಿಣ ತಾಲ್ಲೂಕಿನ ತಹಸೀಲ್ದಾರ್ ಕಛೇರಿಗೆ ಮನವಿ ಪತ್ರ ಸಲ್ಲಿಸಿ, ಯಡಿಯೂರು ನಾಗಸಂದ್ರ ಗ್ರಾಮದ ಸರ್ವೆ ನಂಬರ್ 36/2 ರಲ್ಲಿ ಹಾದು ಹೋಗಿರುವ ರಾಜಕಾಲುವೆಯ ದಿಕ್ಕನ್ನು ಬದಲಿಸಿಕೊಡುವಂತೆ ಮನವಿ ಮಾಡಿಕೊಂಡಿದ್ದಾರೆ. ಅವರ ಈ ಮನವಿ ಸಂಪೂರ್ಣವಾಗಿ ಕಾನೂನು ಬಾಹಿರವಾದ ಮನವಿಯಾಗಿರುತ್ತದೆ ಎಂದು ಅವರು ದೂರಿನಲ್ಲಿ ದಾಖಲೆ ನೀಡಿದ್ದಾರೆ.

ಸರ್ವೆ ನಂಬರ್ 36/2 ರ ಸ್ವತ್ತು ಸಂಪೂರ್ಣವಾಗಿ ಸರ್ಕಾರಿ ಬಿ ಖರಾಬು ಸ್ವತ್ತಾಗಿರುತ್ತದೆ. ಮುಂದುವರೆದಂತೆ, ದಿನಾಂಕ 25/03/2024 ರಂದು ಬೆಂಗಳೂರು ದಕ್ಷಿಣ ತಾಲ್ಲೂಕಿನ ತಹಸೀಲ್ದಾರ್ ಅವರು ಸದರಿ ಯಡಿಯೂರು ನಾಗಸಂದ್ರ ಗ್ರಾಮವು ಗೆಜೆಟ್ ನೋಟಿಫಿಕೇಷನ್ ಸಂಖ್ಯೆ: -56/66-67 ರಂತೆ ನಗರ ಭೂಮಾಪನ ವ್ಯಾಪ್ತಿಗೆ ಒಳಪಟ್ಟಿರುವ ಕಾರಣ ಇದಕ್ಕೆ ಸಂಬಂಧಪಟ್ಟ ನಿರ್ಧಾರವನ್ನು ತೆಗೆದುಕೊಳ್ಳಬೇಕಿರುವುದು ಭೂದಾಖಲೆಗಳ ಇಲಾಖೆ ಎಂದು ಟಿಪ್ಪಣಿಯನ್ನು ಬರೆದಿರುತ್ತಾರೆ.

ಅದಾದನಂತರ, ಭೂದಾಖಲೆಗಳ ಸಹಾಯಕ ನಿರ್ದೇಶಕರು, ನಗರ ಮಾಪನ ತಂಡ 03, ಕೆ.ಆರ್. ವೃತ್ತ ಇವರು ಕಾನೂನು ಬಾಹಿರವಾದ ನಿರ್ಣಯವನ್ನು ತೆಗೆದುಕೊಂಡಿರುವ ವಿಷಯ ತಿಳಿದು ಬಂದಿರುತ್ತದೆ. ಯಡಿಯೂರು ನಾಗಸಂದ್ರ ಗ್ರಾಮದ ಸರ್ವೆ ನಂಬರ್ 36/2 ರ 1.13 ಎಕರೆ ವಿಸ್ತೀರ್ಣದ ಸ್ವತ್ತು ಸಂಪೂರ್ಣ ಸರ್ಕಾರಿ ಬಿ ಖರಾಬು ಸ್ವತ್ತಾಗಿದ್ದು, ಸುಮಾರು 100 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯಯುತವಾಗಿರುತ್ತದೆ.

ಆದರೆ, ಶರ್ಮಿಳ ಭಕ್ತಾರಾಂ ಅವರು ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡಿರುವ ವಿಷಯ ದಾಖಲೆಗಳ ಸಹಿತವೇ ರುಜುವಾತಾಗಿದ್ದರೂ ಸಹ, ಭೂದಾಖಲೆಗಳ ಸಹಾಯಕ ನಿರ್ದೇಶಕರಾದ ಕುಸುಮ ಲತಾ ಅವರು ಕಾನೂನು ಬಾಹಿರವಾಗಿ ನಿರ್ಣಯವನ್ನು ತೆಗೆದುಕೊಂಡು ಸದರಿ ಸರ್ಕಾರಿ ಸ್ವತ್ತಿನಲ್ಲಿ ಹಾದು ಹೋಗಿದ್ದ ರಾಜಕಾಲುವೆಯ ದಿಕ್ಕನ್ನು ಬದಲಿಸುವ ಬಗ್ಗೆ ವರದಿಯನ್ನು ಮಂಡಿಸಿರುತ್ತಾರೆ ಎಂಬ ಆಘಾತಕಾರಿ ವಿಷಯ ತಿಳಿದುಬಂದಿರುತ್ತದೆ.

ಹೀಗಾಗಿ ಕುಸುಮ ಲತಾ ರವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಮತ್ತು ಶರ್ಮಿಳ ಭಕ್ತಾರಾಂ ರವರು ಕಬಳಿಸಲು ಹೊರಟಿರುವ ಸರ್ಕಾರಿ ಸ್ವತ್ತನ್ನು ಸಂರಕ್ಷಿಸಿಕೊಳ್ಳುವ ಬಗ್ಗೆ ಕಾನೂನು ರೀತ್ಯಾ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ದಾಖಲೆಗಳ ಸಹಿತ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಮಾನ್ಯ ಆಯುಕ್ತರನ್ನು ರಮೇಶ್ ಆಗ್ರಹಿಸಿದ್ದಾರೆ.

# ಶಾಲಾ-ಕಾಲೇಜು, ಸಾರ್ವಜನಿಕರ ಚಿತ್ರಕಲಾ ಸ್ಪರ್ಧೆಗೆ 25 ಕೋಟಿ ರೂ ಮೀಸಲು: ಡಿ.ಕೆ.ಶಿವಕುಮಾರ್



ಬೆಂಗಳೂರು ಜೂ 13- "ಶಾಲಾ,-ಕಾಲೇಜು ಹಾಗೂ ಸಾರ್ವಜನಿಕರಿಗೆ ಚಿತ್ರಕಲಾ ಸ್ಪರ್ಧೆಯನ್ನು ವರ್ಷಕ್ಕೆ ಮೂರು ದಿನ ಸರ್ಕಾರದ ವತಿಯಿಂದ ಏರ್ಪಡಿಸಲಾಗುವುದು. ಇದಕ್ಕಾಗಿ 25 ಕೋಟಿ ರೂ. ಮೀಸಲಿಡಲಾಗುವುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಬ್ರಿಗೇಡ್ ಫೌಂಡೇಶನ್‌ನಿಂದ ನವೀಕರಣಗೊಂಡ ವೆಂಕಟಪ್ಪ ಆರ್ಟ್ ಗ್ಯಾಲರಿಯನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

"ಡಿಸೆಂಬರ್ ಕೊನೆ ವಾರದಲ್ಲಿ ಹೆಚ್ಚು ರಜೆಗಳು ಇರುತ್ತವೆ. ಇದರ ಬಗ್ಗೆ ರೂಪುರೇಷೆಗಳನ್ನು ಒಂದು ವಾರದಲ್ಲಿ ರೂಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಯುವ ಪೀಳಿಗೆಗೆ ನಮ್ಮ ಇತಿಹಾಸ ತಿಳಿಯಬೇಕು ಎಂದು ವಿಧಾನಸೌಧ ಪ್ರವೇಶಕ್ಕೆ ಅವಕಾಶ ನೀಡಲಾಗಿದೆ. ಚಿತ್ರಸಂತೆ, ಪುಸ್ತಕ ಮೇಳೆ ಆಯೋಜಿಸಲಾಗಿದೆ. ಈ ಮೂಲಕ ಬೆಂಗಳೂರಿಗೆ ಹೊಸ ರೀತಿಯ ರೂಪ ನೀಡಲು ಪ್ರಯತ್ನ ಮಾಡಲಾಗುತ್ತಿದೆ" ಎಂದರು.

"ಬೆಂಗಳೂರಿನಲ್ಲಿ ಶಾಲೆಗೆ ಒಟ್ಟಿಗೆ ಕರೆದರೆ 30-40 ಸಾವಿರ ಜನರು ಬರುತ್ತಾರೆ. ಅದಕ್ಕಾಗಿ ಶಾಲೆಗಳ ನಡುವೆ ಮೊದಲು ಸ್ಪರ್ಧೆ ನಡೆಸಿ ನಂತರ ಅಂತಿಮ ಸ್ಪರ್ಧೆ ಏರ್ಪಡಿಸುವ ಬಗ್ಗೆ ಆಲೋಚನೆ ಮಾಡಲಾಗುವುದು. ಇದನ್ನು ಹೇಗೆ ರೂಪಿಸಬೇಕು ಎಂದು ಕಲಾವಿದರು, ಕಲಾಸಕ್ತರು ಸಲಹೆ ನೀಡಬೇಕು" ಎಂದು ತಿಳಿಸಿದರು.

"ನಮ್ಮ ಪರಂಪರೆ ನಮ್ಮ ಆಸ್ತಿ. ಮುಂದಿನ ಪೀಳಿಗೆ ಇದನ್ನು ಉಳಿಸಿಕೊಂಡು ಹೋಗಬೇಕು. ಕಲೆ ಕಲೆಗಾಗಿ ಅಲ್ಲ, ಕಲೆ ಸಮಾಜಕ್ಕಾಗಿ ಎನ್ನುವುದನ್ನು ನಾವು ಮರೆಯಬಾರದು. ವೆಂಕಟಪ್ಪ ಆರ್ಟ್ ಗ್ಯಾಲರಿ ಸರ್ಕಾರದ ಆಸ್ತಿಯಲ್ಲ, ಸಮಾಜದ ಆಸ್ತಿ. ಕಲೆ ಪ್ರಪಂಚವನ್ನು ಉಳಿಸುತ್ತದೆ. ನಮ್ಮ ಕಲ್ಪನೆ ಜ್ಞಾನಕ್ಕಿಂತ ದೊಡ್ಡದು ಎಂದು ಹಿರಿಯರು ಹೇಳಿದ್ದಾರೆ. ಕಲೆಯನ್ನು ಕಣ್ಣಲ್ಲಿ ನೋಡಿದಾಗ ಮಾತ್ರ ಅನುಭವಿಸಲು ಸಾಧ್ಯ. ನಮ್ಮ ಕಲೆ ನಮ್ಮ ಆಸ್ತಿ. ಇದು ಉಳಿಯಬೇಕು ಎಂದರೆ ಪ್ರವಾಸೋದ್ಯಮ ಬೆಳೆಯಬೇಕು" ಎಂದು ಹೇಳಿದರು.

"ನಾನು ಶಾಲಾ ದಿನಗಳಲ್ಲಿ ಬೇಲೂರು, ಹಳೇಬೀಡು ಹಾಗೂ ಹೈದರಾಬಾದ್‌ನ ಸಾಲಾರ್ ಜಂಗ್ ಮ್ಯೂಸಿಯಂಗೆ ಹೋಗಿದ್ದೆ. ಆಗ ನಮ್ಮ ಅಧ್ಯಾಪಕರಿಗೆ, ನಮ್ಮಲ್ಲಿ ಈ ರೀತಿಯ ಮ್ಯೂಸಿಯಂ ಇಲ್ಲವೇ ಎಂದು ಕೇಳಿದ್ದೆ. ಇದಾದ ನಂತರ ನನ್ನನ್ನು ಮೂರು ತಿಂಗಳ ನಂತರ ಇಲ್ಲಿಗೆ ಕರೆದುಕೊಂಡು ಬಂದಿದ್ದರು" ಎಂದು ನೆನಪುಗಳನ್ನು ಮೆಲುಕು ಹಾಕಿದರು.

"ಬೆಂಗಳೂರಿನ ಟ್ರಾಫಿಕ್ ತೊಂದರೆಗಳನ್ನು ತಪ್ಪಿಸಲು ಪ್ರಯತ್ನ ಮಾಡುತ್ತಿದ್ದೇವೆ. ಒಂದು ದಿನದಲ್ಲಿ ಆಗುವ ಕೆಲಸವಲ್ಲ ಇದು. ಆದರೆ ಪ್ರಯತ್ನ ಬಿಡಬಾರದು. ಟನಲ್ ರಸ್ತೆ, ಫ್ಲೈ ಓವರ್, ಮೆಟ್ರೋ ಸೇರಿದಂತೆ ಅನೇಕ ಯೋಜನೆಗಳಿಗೆ ರೂಪುರೇಷೆಗಳನ್ನು ರೂಪಿಸಲಾಗಿದೆ" ಎಂದು ಹೇಳಿದರು.

"ಪ್ರಣವ್ ಮುಖರ್ಜಿ ಅವರು ಹಾಗೂ ಮನಮೋಹನ್ ಸಿಂಗ್ ಅವರನ್ನು ಈ ಸಂದರ್ಭದಲ್ಲಿ ನೆನಪಿಸಿಕೊಳ್ಳಬೇಕು. ಅವರ ಕಾರಣಕ್ಕೆ ಸಿಎಸ್‌ಆರ್ ನಿಧಿಯನ್ನು ಇಂತಹ ಸಮಾಜಮುಖಿ ಕೆಲಸಗಳಿಗೆ ಬಳಸಿಕೊಳ್ಳಲು ಸಾಧ್ಯವಾಗುತ್ತಿದೆ. ಈ ನಿಟ್ಟಿನಲ್ಲಿ ಮುಂದಿನ ಮೂರು ವರ್ಷಗಳಲ್ಲಿ 1 ಲಕ್ಷ ಕೋಟಿ ಯೋಜನೆ ರೂಪಿಸಲಾಗಿದೆ" ಎಂದರು.

"ಬ್ರಿಗೇಡ್ ಫೌಂಡೇಶನ್ ಅವರು ಇದೊಂದೆ ಕೆಲಸ ಮಾಡುತ್ತಿಲ್ಲ. ಬೆಂಗಳೂರಿಗೆ ಹೊಸ ವಿನ್ಯಾಸ ನೀಡುತ್ತಿದ್ದಾರೆ. ಬೆಂಗಳೂರಿನಲ್ಲಿ ಸರ್ಕಾರ ಎಂಟತ್ತು ಕಟ್ಟಡಗಳನ್ನು ಕಟ್ಟಿರಬಹುದು. ಹೆಚ್ಚಿನ ಕಟ್ಟಡಗಳನ್ನು ಬ್ರಿಗೇಡ್, ಶೋಭಾ, ಪ್ರೆಸ್ಟೀಜ್ ಸೇ-ರಿದಂತೆ ಅನೇಕ ಸಂಸ್ಥೆಗಳು ನಿರ್ಮಾಣ ಮಾಡಿವೆ. ನಗರಕ್ಕೆ ಹೊಸ ರೂಪ ನೀಡಿವೆ" ಎಂದು ಹೇಳಿದರು.

## ಜಾತಿಗಣತಿ ಮರು ಸಮೀಕ್ಷೆ;
# ಸರ್ಕಾರದ ತೀರ್ಮಾನಕ್ಕೆ ರಾಜ್ಯ ಒಕ್ಕಲಿಗರ ಸಂಘ ಸ್ವಾಗತ



ಬೆಂಗಳೂರು ಜೂ 13- ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ, ಶೈಕ್ಷಣಿಕ (ಜಾತಿಗಣತಿ) ಸಮೀಕ್ಷೆಯನ್ನು ಪುನಃ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿರುವುದನ್ನು ರಾಜ್ಯ ಒಕ್ಕಲಿಗರ ಸಂಘ ಸ್ವಾಗತಿಸಿದೆ.

ಸಂಘದ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಬಿ.ಕೆಂಚಪ್ಪಗೌಡ, ಕಾಂತರಾಜು ಅವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ನಡೆಸಲಾಗಿದ್ದ ಸಮೀಕ್ಷೆಯು ವೈಜ್ಞಾನಿಕವಾಗಿಲ್ಲ. ಮರುಸಮೀಕ್ಷೆ ಮಾಡಬೇಕು ಎಂಬ ನಮ್ಮ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ. ಜಾತಿಗಣತಿಯು ವೈಜ್ಞಾನಿಕವಾಗಿಲ್ಲ. ಪ್ರತಿ ಮನೆ ಮನೆಗೆ ಹೋಗಿ ಸಮೀಕ್ಷೆ ಮಾಡಿಲ್ಲ. ಅಂಕಿ - ಅಂಶಗಳು ದೋಷಪೂರಿತವಾಗಿವೆ. ಹಾಗಾಗಿ, ಮತ್ತೆ ಸಮೀಕ್ಷೆ ನಡೆಸಬೇಕು ಎಂದು ಒತ್ತಾಯಿಸಲಾಗಿತ್ತು ಎಂದು ಹೇಳಿದರು.

ಹತ್ತು ವರ್ಷಗಳಷ್ಟು ಹಳೆಯ ದತ್ತಾಂಶಗಳನ್ನು ಒಳಗೊಂಡಿದ್ದು, ಮರು ಸಮೀಕ್ಷೆಯನ್ನು ಸರ್ಕಾರ ನಡೆಸಬೇಕು ಎಂದು ನಮ್ಮ ಸಂಘದಿಂದ ಒತ್ತಾಯಿಸಲಾಗಿತ್ತು. ಸರ್ಕಾರ ಹಠಕ್ಕೆ ಬಿದ್ದು ಹತ್ತು ವರ್ಷಗಳಷ್ಟು ಹಳೆಯದಾದ ಜಾತಿಗಣತಿ ವರದಿ ಅನುಷ್ಠಾನ ಮಾಡಲು ಮುಂದಾದರೆ, ಒಕ್ಕಲಿಗರ ಸಂಘವು ವಿವಿಧ ಸಂಘಟನೆಗಳ ಜತೆಗೂಡಿ ಬೀದಿಗಿಳಿದು ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದ್ದೆವು ಎಂದರು.

ಜಾತಿ ಗಣತಿ ವಿಚಾರದಲ್ಲಿ ಸರ್ಕಾರ ಮರುಸಮೀಕ್ಷೆ ನಡೆಸುವ ತೀರ್ಮಾನಕ್ಕೆ ಬಂದಿರುವುದು ಸಮಂಜಸವಾಗಿದೆ. ನಾವು ಇದುವರೆಗೂ ಪ್ರಸ್ತಾಪ ಮಾಡುತ್ತಿದ್ದ ವಿಚಾರಗಳನ್ನೇ ಮುಂದಿಟ್ಟು ಮರು ಸಮೀಕ್ಷೆಗೆ ಸೂಚಿಸಲಾಗಿದೆ. ಹೀಗಾಗಿ, ನಾವು ಮೊದಲಿನಿಂದಲೂ ವಾಸ್ತವಿಕ ಅಂಶಗಳ ಆಧಾರದ ಮೇಲೆ ಕಾಂತರಾಜು ಅವರ ವರದಿ ಅನುಷ್ಠಾನ ಬೇಡವೆಂದು ಸರ್ಕಾರಕ್ಕೆ ಒತ್ತಾಯಿಸಿದ್ದೆವು. ಆದರೆ, ನಾವು ವೈಜ್ಞಾನಿಕವಾಗಿ ಸಮೀಕ್ಷೆ ನಡೆಸುವುದಕ್ಕೆ ಮತ್ತು ವೈಜ್ಞಾನಿಕ ವರದಿ ಅನುಷ್ಠಾನಕ್ಕೆ ವಿರೋಧ ಮಾಡಿರಲಿಲ್ಲ ಎಂದು ತಿಳಿಸಿದರು.

ಈ ಬಗ್ಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರಿಗೆ ಮನವಿ ಪತ್ರಗಳನ್ನು ಸಲ್ಲಿಸಿದ್ದೆವು. ಜೊತೆಗೆ ಕಾಂತರಾಜು ಅವರ ನಂತರ ಜಯಪ್ರಕಾಶ್ ಹೆಗ್ಡೆ ಅವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದಾಗ ಮತ್ತೆ ಮನೆ ಮನೆ ಸಮೀಕ್ಷೆ ನಡೆಸಬೇಕು. ಹೊಸದಾಗಿ ದತ್ತಾಂಶಗಳನ್ನು ಪಡೆಯಬೇಕು ಎಂದು ಮನವಿ ಸಲ್ಲಿಸಿದ್ದೆವು ಎಂದು ವಿವರಿಸಿದರು.

ಹಲವು ಸಂಘ-ಸಂಸ್ಥೆಗಳು ಹಾಗೂ ಸಮುದಾಯಗಳ ವಿರೋಧದ ನಡುವೆ ಸರ್ಕಾರ ಅವೈಜ್ಞಾನಿಕ ವರದಿ ಅನುಷ್ಠಾನಕ್ಕೆ ಮುಂದಾಗಿ ಮೂರು ನಾಲ್ಕು ಬಾರಿ ಸಂಪುಟ ಸಭೆಯಲ್ಲೂ ಚರ್ಚೆ ಮಾಡಿತ್ತು. ಮರು ಸಮೀಕ್ಷೆಯನ್ನು ವೈಜ್ಞಾನಿಕವಾಗಿ, ಪಾರದರ್ಶಕವಾಗಿ, ಪ್ರತಿ ಮನೆಗಳಿಗೆ ಭೇಟಿ ನೀಡಿ ಜಾತಿವಾರು ಮಾಹಿತಿ ಸಂಗ್ರಹಿಸಬೇಕು. ಆನ್‌ಲೈನ್ ಮೂಲಕವೂ ಅವಕಾಶ ಕಲ್ಪಿಸುವುದಾಗಿ ಸರ್ಕಾರ ಪ್ರಕಟಿಸಿದೆ. ಹಿಂದಿನ ಗಣತಿಯ ಸಂದರ್ಭದಲ್ಲಿ ಆಗಿದ್ದ ಲೋಪದೋಷಗಳನ್ನು ಸರಿಪಡಿಸಿಕೊಂಡು ಎಲ್ಲರಿಗೂ ಒಪ್ಪಿತವಾಗುವ ವರದಿ ಪಡೆಯಲಿ ಎಂಬುದೇ ನಮ್ಮ ಆಶಯ ಎಂದು ಹೇಳಿದರು.

ಒಕ್ಕಲಿಗರ ಸಂಘದಿಂದಲೂ ನಮ್ಮ ಸಮುದಾಯದ ಡಿಜಿಟಲ್ ಸರ್ವೆ ಮಾಡಿಸುತ್ತೇವೆ. ಮರು ಸಮೀಕ್ಷೆಯಲ್ಲೂ ಸರ್ಕಾರ ಲೋಪವೆಸಗಿದರೆ ನಮ್ಮ ಹೋರಾಟ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಒಕ್ಕಲಿಗರ ಸಂಘದ ಪದಾಧಿಕಾರಿಗಳಾದ ಕೋನಪ್ಪರೆಡ್ಡಿ, ಯಲುವಳ್ಳಿ ರಮೇಶ್, ಎಲ್.ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.

# ಅದ್ದೂರಿಯಾಗಿ ಜರುಗಿದ ಡಾನ್ಸ್ ಸ್ಟುಡಿಯೋದ ದಶಮಾನೋತ್ಸವ ಸಂಭ್ರಮ

ಜನವಾದಿ ವಾರ್ತೆ



ಲಿಂಗಸೂಗೂರು ಜೂ 13- ತಾಲೂಕಿನ ಕರಡಕಲ್ ರಸ್ತೆಯಲ್ಲಿರುವ ತಾಲೂಕು ಕ್ರೀಡಾಂಗಣದಲ್ಲಿ ಗುರುವಾರ ಸಂಜೆ ಪಟ್ಟಣದ ಎ ವಿ ಡ್ಯಾನ್ಸ್ ಸ್ಟುಡಿಯೋದ ದಶಮಾನೋತ್ಸವ ಸಂಭ್ರಮ ಅದ್ದೂರಿಯಾಗಿ ಜರುಗಿತು.

ಸಂಗೀತ ಮತ್ತು ನೃತ್ಯ ಮಾನಸಿಕ ನೆಮ್ಮದಿಯ ಜೊತೆಗೆ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಬಹು ಮುಖ್ಯ ಪಾತ್ರ ವಹಿಸುತ್ತದೆ. ಹಾಗಾಗಿ ಮಕ್ಕಳು ಬರೀ ಪಠ್ಯ ಚಟುವಟಿಕೆಗೆ ಸೀಮಿತವಾಗದೆ ಸಂಗೀತ, ನೃತ್ಯ, ಕ್ರೀಡೆಯಂತಹ ಚಟುವಟಿಕೆಯಲ್ಲಿ ತೊಡಗಿಸಿ ಎಂದು ಕಾರ್ಯಕ್ರಮದ ಅತಿಥಿಯಾಗಿ ಭಾಗವಹಿಸಿದ ಡಾ. ರಂಗನಾಥ್ ರವರು ಪಾಲಕರಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಗೋವಿಂದ್ ನಾಯಕ್, ಜಯಶ್ರೀ ಅಬ್ರಹಾಂ, ಹಿರಿಯ ಪತ್ರಕರ್ತ ಶಿವರಾಜ್ ಕೆಂಭಾವಿ, ಡಾ ರಂಗನಾಥ್, ದೇವೇಂದ್ರ ಗುತ್ತೇದಾರ್, ಶ್ರೀಧರ್ ಕಿರಗಿ,ಪ್ರಕಾಶ್ ಚೇತನ್ ಸೌಂಡ್, ಗಂಗಮ್ಮ ಕಟ್ಟಿಮನಿ, ನಾಗರೆಡ್ಡಿ ರಾಠೋಡ್,ಶೋಭಾ ರವಿಕುಮಾರ್, ಚಂದ್ರಶೇಖರ ಹಿರೇಮಠ್ ರಾಜಶೇಖರ್ ಮೇದಾರ, ಮಾರುತಿ ಜಿಮ್ ಹಾಗೂ ಇನ್ನಿತರ ಗಣ್ಯ ವ್ಯಕ್ತಿಗಳು ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ದಶಮಾನೋತ್ಸವ ಸಮಾರಂಭದಲ್ಲಿ ಅನೇಕ ಮಕ್ಕಳ ವಿಶೇಷ ನೃತ್ಯ ನೋಡುಗರ ಮನಸೆಳೆಯಿತು.

ಈ ಸಂದರ್ಭದಲ್ಲಿ ಡಾನ್ಸ್ ಮಾಸ್ಟರ್ ಅಭಿವರ್ಧನ್, ಉಪ್ಪಿ, ಗೋವಿಂದ್ ರಾಠೋಡ್, ಅಲ್ಲಾ ಬಕ್ಷಿ, ಕೃಷ್ಣ, ಅಮರೇಶ್ ಹಾಗೂ ವಸಂತ್ ಕುಮಾರ್ ಸೇರಿದಂತೆ ಡಾನ್ಸ್ ತಂಡದವರು ಇದ್ದರು.

# ಎಕ್ಸಲೆಂಟ್ ಕಾಲೇಜಿನಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನ ಆಚರಣೆ

ಜನವಾದಿ ವಾರ್ತೆ



ಸಿಂಧನೂರು ಜು 13- ಮಕ್ಕಳ ಕೈಯಲ್ಲಿ ಪುಸ್ತಕ ಇರಲಿ, ಕೆಲಸವಲ್ಲ ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕಲ್ಪಿಸಿ ಕೊಡುವುದರ ಮೂಲಕ ಬಾಲ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆಗೊಳಿಸೋಣ ಎಂದು ಉಪನ್ಯಾಸಕ ಡಾ.ಶ್ಯಾಮಣ್ಣ ಮಡ್ಡೇರ್ ಅಭಿಪ್ರಾಯಪಟ್ಟರು.

ನಗರದ ಎಕ್ಸಲೆಂಟ್ ಮಹಾವಿದ್ಯಾಲಯ ಸಿಂಧನೂರು, ಐಕ್ಯೂಎಸಿ ಹಾಗೂ ಎನ್‌ಎಸ್-ಎಸ್ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಪಾಲಕರು ತಮ್ಮ ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ ಕೊಡಿಸಬೇಕು. ವಿದ್ಯಾರ್ಥಿಗಳ ವಿದ್ಯಾಭ್ಯಾಸ ಬಿಟ್ಟು ಕೆಲಸಕ್ಕೆ ಹೋಗದೆ ಚೆನ್ನಾಗಿ ಓದಿ ವಿದ್ಯಾವಂತರಾಗಬೇಕೆಂದರು.

ಹಿರಿಯ ಉಪನ್ಯಾಸಕರಾದ ಎಚ್.ಡಿ. ಹಳ್ಳೂರು ಮಾತನಾಡಿ. ಮಕ್ಕಳು ಬಡತನದ ಕಾರಣದಿಂದ, ಪೋಷಕರ ಅನಕ್ಷರತೆಯ ಕಾರಣದಿಂದ ಬಾಲಕಾರ್ಮಿಕ ಕಾರ್ಯದಲ್ಲಿ ತೊಡಗುತ್ತಾರೆ. ಅವರಿಗೆ ಸರಿಯಾದ ಮಾರ್ಗದರ್ಶನ ನೀಡಬೇಕು ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಎಂ.ವೆಂಕಟರಾವ್ ವಹಿಸಿದ್ದರು. ಉಪನ್ಯಾಸಕರಾದ ಖಾಸಿಂ ಖುರೇಶಿ, ಎನ್.ಎಸ್.ಎಸ್. ಶಿಬಿರಾಧಿಕಾರಿ ಮೆಹಬೂಬ ಕೋಳಬಾಳ, ನೇತ್ರಾವತಿ, ವಸಂತ, ಬಸವಲಿಂಗ, ವಿನಯ ಸೇರಿದಂತೆ ಅನೇಕರಿದ್ದರು.

# ಚುನಾವಣಾ ಆಯೋಗವು ಈ ಪ್ರಶ್ನೆಗಳಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ

ರಾಹುಲ್ ಗಾಂಧಿ ಅವರು ಪ್ರಸ್ತುತಪಡಿಸಿದ ಪುರಾವೆಗಳು ಗಂಭೀರ ಅನುಮಾನಗಳನ್ನು ಹುಟ್ಟುಹಾಕಲು ಸಾಕು. ಡಿಸೆಂಬರ್ 2024ರಲ್ಲಿ ಕಾಂಗ್ರೆಸ್‌ಗೆ ಕಳುಹಿಸಲಾದ ಪತ್ರದಲ್ಲಿ ಚುನಾವಣಾ ಆಯೋಗವು ಈ ಕೆಲವು ವಿಷಯಗಳಿಗೆ ಪ್ರತಿಕ್ರಿಯಿಸಿದೆ. ಸಮಸ್ಯೆಯೆಂದರೆ, ಈ ಇಡೀ ವಿಷಯದಲ್ಲಿ, ಚುನಾವಣಾ ಆಯೋಗವು ಪ್ರತಿದಾಳಿ ನಡೆಸುತ್ತಿದೆ. ಅನುಮಾನಗಳನ್ನು ಪರಿಹರಿಸುವ ಬದಲು, ಅದು ಅನುಮಾನ ವ್ಯಕ್ತಪಡಿಸಿದವರ ಕಡೆಗೆ ಬೆರಳು ತೋರಿಸಿದೆ.

ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತೊಮ್ಮೆ ಚುನಾವಣಾ ಪ್ರಕ್ರಿಯೆಯ ಸತ್ಯಾಸತ್ಯತೆಯ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದಾರೆ. ಪ್ರಜಾಪ್ರಭುತ್ವ ಪ್ರಕ್ರಿಯೆಯೊಂದಿಗೆ ಸಂಬಂಧ ಹೊಂದಿರುವ ಅನೇಕ ಪಕ್ಷೇತರ ಸಂಸ್ಥೆಗಳು ಮತ್ತು ವ್ಯಕ್ತಿಗಳು ಮತ್ತೊಮ್ಮೆ ಅವರ ಧ್ವನಿಗೆ ತಮ್ಮ ಧ್ವನಿಯನ್ನು ಸೇರಿಸಿದ್ದಾರೆ. ಬಿಜೆಪಿ ನಾಯಕರು ಮತ್ತೊಮ್ಮೆ ಪ್ರತಿದಾಳಿ ನಡೆಸಿದ್ದಾರೆ. ಚೆಂಡು ಚುನಾವಣಾ ಆಯೋಗದ ಅಂಗಳದಲ್ಲಿದೆ. ಆದರೆ ಈ ಸಮಸ್ಯೆಯನ್ನು ಪಾರದರ್ಶಕ ರೀತಿಯಲ್ಲಿ ಪರಿಹರಿಸುವ ಬದಲು, ಚುನಾವಣಾ ಆಯೋಗ ಮತ್ತೊಮ್ಮೆ ಔಪಚಾರಿಕತೆಯನ್ನು ಮಾಡುತ್ತಿದೆ. ಇದು ಪ್ರಜಾಪ್ರಭುತ್ವಕ್ಕೆ ಒಳ್ಳೆಯದಲ್ಲ.

ಚುನಾವಣೆಗಳ ಸತ್ಯಾಸತ್ಯತೆಯ ಪ್ರಶ್ನೆಯೂ ಸೂಕ್ಷ್ಮ ಮತ್ತು ಮುಖ್ಯವಾಗಿದೆ. ಆದ್ದರಿಂದ, ಅದರಲ್ಲಿ ಭಾಗಿಯಾಗಿರುವ ಎಲ್ಲಾ ಪಕ್ಷಗಳು ಎಚ್ಚರಿಕೆಯಿಂದ ಮುಂದುವರಿಯಬೇಕಾಗುತ್ತದೆ. ಚುನಾವಣೆಯಲ್ಲಿ ಸೋತ ನಂತರ ಚುನಾವಣಾ ಪ್ರಕ್ರಿಯೆಯನ್ನು ದೂಷಿಸುವುದು ಸುಲಭವಾದ ಕೆಲಸ. ಆದ್ದರಿಂದ, ಕೇವಲ ಅನುಮಾನಗಳನ್ನು ಹುಟ್ಟುಹಾಕುವುದು ಅಥವಾ ಒಂದು ಅಥವಾ ಎರಡು ಅಕ್ರಮಗಳನ್ನು ತೋರಿಸುವ ಕೆಲಸ ಮಾಡುವುದಿಲ್ಲ. ಚುನಾವಣಾ ವಂಚನೆಯ ಯಾವುದೇ ಆರೋಪವನ್ನು ಸಾಬೀತುಪಡಿಸಲು ಘನ ಪುರಾವೆಗಳನ್ನು ಪ್ರಸ್ತುತಪಡಿಸಬೇಕಾಗುತ್ತದೆ. ಮತ್ತೊಂದೆಡೆ, ಚುನಾವಣಾ ಪ್ರಕ್ರಿಯೆಯನ್ನು ಸಾಬೀತುಪಡಿಸಲು ಈ ಹೇಳಿಕೆಯನ್ನು ನೀಡುವುದು ಸಾಕಾಗುವುದಿಲ್ಲ. ಚುನಾವಣೆಗಳು ನ್ಯಾಯಯುತವಾಗಿರಬೇಕು ಮತ್ತು ನ್ಯಾಯಯುತವಾಗಿ ಕಾಣಬೇಕು. ಚುನಾವಣಾ ಆಯೋಗವು ಪಾರದರ್ಶಕತೆ ಮತ್ತು ನ್ಯಾಯಯುತತೆಯ ಪ್ರತಿಯೊಂದು ಪರೀಕ್ಷೆಯನ್ನು ಎದುರಿಸಬೇಕಾಗುತ್ತದೆ.

ರಾಹುಲ್ ಗಾಂಧಿಯವರು ಹೊಸ ಲೇಖನದಲ್ಲಿ ಯಾವುದೇ ಹೊಸ ವಿಷಯ ಬಹಿರಂಗಪಡಿಸಿಲ್ಲ. ಅವರು ಈ ಹಿಂದೆ ಪತ್ರಿಕಾಗೋಷ್ಠಿಯಲ್ಲಿ ಎತ್ತಿದ್ದ ಪ್ರಶ್ನೆಗಳನ್ನೇ ಮಹಾರಾಷ್ಟ್ರ ಚುನಾವಣೆಯ ಬಗ್ಗೆಯೂ ಎತ್ತಿದ್ದಾರೆ. ಮುಖ್ಯ ಪ್ರಶ್ನೆಯೆಂದರೆ, ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಗಳ ನಡುವಿನ ಆರು ತಿಂಗಳ ಅಂತರದಲ್ಲಿ ಮಹಾರಾಷ್ಟ್ರದ ಮತದಾರರ ಪಟ್ಟಿಯಲ್ಲಿ ಒಟ್ಟು 40 ಲಕ್ಷ ಹೆಚ್ಚಳ (48 ಲಕ್ಷಕ್ಕೂ ಹೆಚ್ಚು ಮತದಾರರನ್ನು ಸೇರಿಸಲಾಗಿದೆ ಮತ್ತು 8 ಲಕ್ಷ ಮತದಾರರನ್ನು ಅಳಿಸಲಾಗಿದೆ). ಕಳೆದ ಐದು ವರ್ಷಗಳಲ್ಲಿ (2019ರ ವಿಧಾನಸಭಾ ಚುನಾವಣೆಯಿಂದ 2024ರ ಲೋಕಸಭಾ ಚುನಾವಣೆಯವರೆಗೆ) ಮಹಾರಾಷ್ಟ್ರದಲ್ಲಿ ಕೇವಲ 32 ಲಕ್ಷ ಮತದಾರರು ಹೆಚ್ಚಿದ್ದರೆ, ಕೇವಲ ಆರು ತಿಂಗಳಲ್ಲಿ 40 ಲಕ್ಷ ಮತದಾರರು ಹೇಗೆ ಹೆಚ್ಚಾದರು ಎಂಬುದು ರಾಹುಲ್ ಗಾಂಧಿಯವರ ಪ್ರಶ್ನೆ. ಇಂತಹ ವ್ಯತ್ಯಾಸ ಹಿಂದೆಂದೂ ಸಂಭವಿಸಿಲ್ಲ ಎಂಬುದಕ್ಕೆ ಅವರು ಪುರಾವೆಗಳನ್ನು ನೀಡಿದ್ದಾರೆ. ಆಶ್ಚರ್ಯಕರ ಸಂಗತಿಯೆಂದರೆ, ಈ ಚುನಾವಣೆಯಲ್ಲಿ ಮಹಾರಾಷ್ಟ್ರದಲ್ಲಿ ಮತದಾರರ ಸಂಖ್ಯೆ ರಾಜ್ಯದ ಅಂದಾಜು ವಯಸ್ಕ ಜನಸಂಖ್ಯೆಗಿಂತ ಹೆಚ್ಚಾಗಿದೆ. ಮತದಾನದ ದಿನದಂದು ಸಂಜೆ 5 ಗಂಟೆಗೆ ಘೋಷಿಸಲಾದ 58 ಪ್ರತಿಶತ ಮತದಾನವು ಮರುದಿನದ ವೇಳೆಗೆ ಅನಿರೀಕ್ಷಿತವಾಗಿ 66 ಪ್ರತಿಶತಕ್ಕೆ ಹೇಗೆ ಏರಿತು ಎಂಬ ಇನ್ನೊಂದು ಪ್ರಶ್ನೆಯನ್ನು ಅವರು ಎತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಸೋತಿದ್ದ ಆ 12,000 ಬೂತ್‌ಗಳಲ್ಲಿ ಈ ಎಲ್ಲಾ ವಂಚನೆ ನಡೆದಿದೆ ಮತ್ತು ಅದನ್ನು ಹಿಮ್ಮುಖಗೊಳಿಸಿ ಗೆಲುವು ಸಾಧಿಸಬಹುದಿತ್ತು ಎಂದು ಅವರು ಆರೋಪಿಸಿದ್ದಾರೆ.

ರಾಹುಲ್ ಗಾಂಧಿ ಅವರು ಪ್ರಸ್ತುತಪಡಿಸಿದ ಪುರಾವೆಗಳು ಗಂಭೀರ ಅನುಮಾನಗಳನ್ನು ಹುಟ್ಟುಹಾಕಲು ಸಾಕು. ಡಿಸೆಂಬರ್ 2024 ರಲ್ಲಿ ಕಾಂಗ್ರೆಸ್‌ಗೆ ಕಳುಹಿಸಲಾದ ಪತ್ರದಲ್ಲಿ ಚುನಾವಣಾ ಆಯೋಗವು ಈ ಕೆಲವು ವಿಷಯಗಳಿಗೆ ಪ್ರತಿಕ್ರಿಯಿಸಿದೆ. ಸಮಸ್ಯೆಯೆಂದರೆ, ಈ ಇಡೀ ವಿಷಯದಲ್ಲಿ, ಚುನಾವಣಾ ಆಯೋಗವು ಪ್ರತಿದಾಳಿಯ ಪಾತ್ರವನ್ನು ಅಳವಡಿಸಿಕೊಂಡಿದೆ. ಅನುಮಾನಗಳನ್ನು ಪರಿಹರಿಸುವ ಬದಲು, ಅದು ಅನುಮಾನ ವ್ಯಕ್ತಪಡಿಸಿದವರ ಕಡೆಗೆ ಬೆರಳು ತೋರಿಸಿದೆ. ಪ್ರಶ್ನೆಗೆ ಉತ್ತರಿಸುವ ಬದಲು, ಅದು ಕಾನೂನು ಔಪಚಾರಿಕತೆಗಳಲ್ಲಿ ಆಶ್ರಯ ಪಡೆದಿದೆ. ಉದಾಹರಣೆಗೆ, ಮತದಾರರ ಪಟ್ಟಿಯ ಹೆಚ್ಚಳದ ವಿಷಯದ ಬಗ್ಗೆ, ಚುನಾವಣಾ ಆಯೋಗವು ಮತದಾರರ ಪಟ್ಟಿಯಲ್ಲಿ ನಮ್ಮ ತಿದ್ದುಪಡಿ ಪ್ರಕ್ರಿಯೆಯು ದೋಷರಹಿತವಾಗಿದೆ ಎಂದು ಹೇಳುತ್ತದೆ. ಪ್ರತಿಯೊಂದು ಪಕ್ಷಕ್ಕೂ ಪ್ರತಿ ಹಂತದಲ್ಲೂ ಆಕ್ಷೇಪಿಸುವ ಹಕ್ಕಿತ್ತು, ಆ ಸಮಯದಲ್ಲಿ ನೀವು ಆಕ್ಷೇಪಿಸಲಿಲ್ಲ. ಇದು ನಿಜವಾಗಿದ್ದರೆ ಮತ್ತು ಮತದಾರರ ಪಟ್ಟಿಯ ಪರಿಷ್ಕರಣೆಯ ಸಮಯದಲ್ಲಿ ವಿರೋಧ ಪಕ್ಷಗಳು ನಿರ್ಲಕ್ಷ್ಯ ವಹಿಸಿವೆ ಎಂದು ಭಾವಿಸೋಣ. ಆಗಲೂ, ಮತದಾರರ ಪಟ್ಟಿಯನ್ನು ಸ್ವತಃ ತನಿಖೆ ಮಾಡುವುದು ಚುನಾವಣಾ ಆಯೋಗದ ಜವಾಬ್ದಾರಿಯಲ್ಲವೇ? ಕಾಗದದ ಮೇಲೆ ಇಷ್ಟೊಂದು ದೋಷರಹಿತ ಪ್ರಕ್ರಿಯೆಯಿದ್ದರೂ, ಆರು ತಿಂಗಳಲ್ಲಿ ಒಟ್ಟು 56 ಲಕ್ಷ ಬದಲಾವಣೆಗಳನ್ನು ಮಾಡಿದವರು, 48 ಲಕ್ಷಕ್ಕೂ ಹೆಚ್ಚು ಹೊಸ ಹೆಸರುಗಳು ಹೇಗೆ ಸೇರ್ಪಡೆಯಾದವು ಮತ್ತು 8 ಲಕ್ಷ ಮತದಾರರು ಹೇಗೆ ಅಳಿಸಲ್ಪಟ್ಟರು? ಈ ಪ್ರಶ್ನೆಗಳಿಗೆ ಸಮಂಜಸವಾದ ಉತ್ತರಗಳಿರುವ ಸಾಧ್ಯತೆಯಿದೆ. ಆದರೆ ಚುನಾವಣಾ ಆಯೋಗಕ್ಕೆ ಪ್ರಶ್ನೆಗಳನ್ನು ಕೇಳಿದಾಗ ಮತ್ತು ಬಿಜೆಪಿ ನಾಯಕರು ಉತ್ತರಗಳನ್ನು ನೀಡಿದಾಗ, ಅನುಮಾನಗಳು ಇನ್ನಷ್ಟು ಹೆಚ್ಚುತ್ತವೆ.

ನಿಜವಾದ ಪ್ರಶ್ನೆಯೆಂದರೆ ರಾಹುಲ್ ಗಾಂಧಿ ಅಥವಾ ಬೇರೆ ಯಾರಾದರೂ ಚುನಾವಣಾ ವಂಚನೆಯ ಘನ ಪುರಾವೆಗಳನ್ನು ಹೇಗೆ ಪ್ರಸ್ತುತಪಡಿಸಬಹುದು? ಚುನಾವಣಾ ಆಯೋಗವು ಸಂಪೂರ್ಣ ಮಾಹಿತಿಯನ್ನು ಸಾರ್ವಜನಿಕಗೊಳಿಸುವುದನ್ನು ತಪ್ಪಿಸುತ್ತಿದೆ. ರಾಹುಲ್ ಗಾಂಧಿಯವರ ಇತರ ಪ್ರಶ್ನೆಗಳು ಸರಿಯಾಗಿಲ್ಲದಿದ್ದರೂ, ಚುನಾವಣಾ ಆಯೋಗವು ಮಾಹಿತಿಯನ್ನು ಏಕೆ ಸಾರ್ವಜನಿಕಗೊಳಿಸುವುದಿಲ್ಲ ಎಂಬ ಅವರ ಪ್ರಶ್ನೆಗೆ ಒಬ್ಬರು ಒಪ್ಪಲು ಸಾಧ್ಯವಿಲ್ಲ. ಮತದಾರರ ಪಟ್ಟಿಯಲ್ಲಿ ಮಾಡಿದ ಬದಲಾವಣೆಗಳಲ್ಲಿ ಅಕ್ರಮಗಳ ಪುರಾವೆಗಳನ್ನು ನೀವು ಒದಗಿಸಬೇಕಾದರೆ, ಎರಡೂ ಪಟ್ಟಿಗಳನ್ನು ಹೋಲಿಸಲು ನಿಮಗೆ ಲೋಕಸಭಾ ಮತ್ತು ವಿಧಾನಸಭಾ ಚುನಾವಣೆಗಳ ಬೂತ್‌ವಾರು ಪಟ್ಟಿಯ ಸಾಫ್ಟ್ ಕಾಪಿ ಅಗತ್ಯವಿದೆ. ಚುನಾವಣಾ ಆಯೋಗವು ಇತ್ತೀಚಿನ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಇರಿಸಿದೆ, ಆದರೆ ಹಳೆಯದನ್ನು ಅಳಿಸಿದೆ. ಸಂಜೆ 5 ಗಂಟೆಯ ನಂತರ ಒಂದು ಬೂತ್‌ನಲ್ಲಿ ಚಲಾಯಿಸಲಾದ ಮತಗಳ ಸಂಖ್ಯೆ ಚುನಾವಣಾ ಆಯೋಗ ಹೇಳಿಕೊಳ್ಳುವಷ್ಟು ಹೆಚ್ಚಿಲ್ಲ ಎಂದು ನೀವು ಸಾಬೀತುಪಡಿಸಲು ಬಯಸಿದರೆ, ನಿಮಗೆ ಆ ಬೂತ್‌ನ ವೀಡಿಯೊ ಬೇಕು. ಚುನಾವಣಾ ಆಯೋಗ ಅದನ್ನು ನೀಡಲು ನಿರಾಕರಿಸಿತು. ಇದಲ್ಲದೇ, ಸರ್ಕಾರವು ಈ ಮಾಹಿತಿಯನ್ನು ಪಡೆಯಬಹುದಾದ ನಿಯಮವನ್ನು ಬದಲಾಯಿಸಿತು. ಲೋಕಸಭಾ ಚುನಾವಣೆಯ ಸಮಯದಿಂದ, ಅನೇಕ ಪಕ್ಷಗಳು ಮತ್ತು ಸಂಸ್ಥೆಗಳು ಯಾವ ಬೂತ್‌ನಲ್ಲಿ ಎಷ್ಟು ಮತಗಳು ಚಲಾಯಿಸಲ್ಪಟ್ಟಿವೆ ಎಂಬುದನ್ನು ದಾಖಲಿಸುವ ಫಾರ್ಮ್ 17ಅ ಅನ್ನು ಸಾರ್ವಜನಿಕಗೊಳಿಸಬೇಕೆಂದು ಒತ್ತಾಯಿಸುತ್ತಿವೆ. ಆದರೆ ಚುನಾವಣಾ ಆಯೋಗವು ಒಂದಲ್ಲ ಒಂದು ನೆಪವನ್ನು ನೀಡುವ ಮೂಲಕ ಈ ಮಾಹಿತಿಯನ್ನು ನೀಡಲು ನಿರಾಕರಿಸುತ್ತಿದೆ. ಪರಿಣಾಮವಾಗಿ, ಎಲ್ಲರೂ ಏನೋ ಅನುಮಾನಾಸ್ಪದವಾಗಿದೆ ಎಂದು ಭಾವಿಸುತ್ತಾರೆ.

ಇದು ಅತ್ಯಂತ ದೊಡ್ಡ ಪ್ರಶ್ನೆ. ಇಪ್ಪತ್ತು ವರ್ಷಗಳ ಹಿಂದೆ, ಚುನಾವಣೆಯಲ್ಲಿ ಸೋತ ಪಕ್ಷವು (ಮಮತಾ ಬ್ಯಾನರ್ಜಿ ಒಮ್ಮೆ ಮಾಡಿದಂತೆ) ಅಂತಹ ಪ್ರಶ್ನೆಗಳನ್ನು ಎತ್ತಿದ್ದರೆ, ಯಾರೂ ಅದನ್ನು ಗಂಭೀರವಾಗಿ ಪರಿಗಣಿಸುತ್ತಿರಲಿಲ್ಲ. ಆ ದಿನಗಳಲ್ಲಿ, ಚುನಾವಣಾ ಆಯೋಗಕ್ಕೆ ಖ್ಯಾತಿ ಇತ್ತು, ಅದರ ಕಟ್ಟುನಿಟ್ಟಿನ ಬಗ್ಗೆ ತಿಳಿದಿತ್ತು. ಚುನಾವಣೆಗಳ ಸಮಯದಲ್ಲಿ, ಆಡಳಿತ ಪಕ್ಷವು ಚುನಾವಣಾ ಆಯೋಗಕ್ಕೆ ಹೆದರುತ್ತಿತ್ತು. ಆದರೆ ಕಳೆದ ಹತ್ತು ವರ್ಷಗಳಲ್ಲಿ, ಚುನಾವಣಾ ಆಯೋಗವು ಆ ಖ್ಯಾತಿಯನ್ನು ಕಳೆದುಕೊಂಡಿದೆ. ಚುನಾವಣಾ ಆಯುಕ್ತರು ಸ್ವತಂತ್ರ ಸಾಂವಿಧಾನಿಕ ಸಂಸ್ಥೆಯ ಬದಲು ಸರ್ಕಾರಿ ಅಧಿಕಾರಿಯಂತೆ ಕೆಲಸ ಮಾಡುತ್ತಿರುವಂತೆ ತೋರುತ್ತಿದೆ. ಚುನಾವಣೆಗಳಿಗೆ ಸಂಬಂಧಿಸಿದ ಪ್ರತಿಯೊಂದು ಪ್ರಮುಖ ನಿರ್ಧಾರದಲ್ಲೂ, ಚುನಾವಣಾ ಆಯೋಗ ಮತ್ತು ಬಿಜೆಪಿ ಕೈಜೋಡಿಸುತ್ತಿವೆ. ಚುನಾವಣಾ ಆಯುಕ್ತರ ನೇಮಕಾತಿಯನ್ನು ನಿಷ್ಪಕ್ಷಪಾತ ರೀತಿಯಲ್ಲಿ ಮಾಡುವಂತೆ ಸುಪ್ರೀಂ ಕೋರ್ಟ್ ಪ್ರಯತ್ನಿಸಿತ್ತು. ಈ ಸರ್ಕಾರ ಅದನ್ನೂ ವಿಫಲಗೊಳಿಸಿತು ಮತ್ತು ಮುಖ್ಯ ನ್ಯಾಯಮೂರ್ತಿಯ ಬದಲಿಗೆ ಗೃಹ ಸಚಿವರನ್ನು ಆಯ್ಕೆ ಸಮಿತಿಯಲ್ಲಿ ಕುಳಿತುಕೊಳ್ಳುವಂತೆ ಮಾಡಿತು. ಸ್ಪಷ್ಟವಾಗಿ, ಅಂತಹ ಪರಿಸ್ಥಿತಿಯಲ್ಲಿ, ಚುನಾವಣಾ ಆಯೋಗವು ಅಂಪೈರ್ ಆಗಿ ಕಡಿಮೆ ಮತ್ತು ಹೆಚ್ಚು ಆಟಗಾರನಾಗಿ ಕಾಣುತ್ತದೆ. ಉಳಿದ ಪ್ರಶ್ನೆಗಳ ಜೊತೆಗೆ, ರಾಹುಲ್ ಗಾಂಧಿ ಈ ಆಯ್ಕೆ ಪ್ರಕ್ರಿಯೆಯಲ್ಲಿನ ಮೂಲಭೂತ ದೋಷವನ್ನು ಎತ್ತಿ ತೋರಿಸಿದ್ದಾರೆ. ಭಾರತೀಯ ಪ್ರಜಾಪ್ರಭುತ್ವದ ಪ್ರತಿಯೊಬ್ಬ ಹಿತೈಷಿಯೂ ಒಪ್ಪುತ್ತಾರೆ.



(ಕೃಪೆ : ಈದಿನಾ.ಕಾಂ)

– ಯೋಗೇಂದ್ರ ಯಾದವ್

# ಇನ್ನು ಮುಂದೆ ರಾಜ್ಯ ಸರ್ಕಾರದಿಂದಲೇ 108 ಆಂಬ್ಯುಲೆನ್ಸ್ ನಿರ್ವಹಣೆ



ಬೆಂಗಳೂರು ಜೂ 13– ರಾಜ್ಯದಲ್ಲಿ ತುರ್ತು ಆರೋಗ್ಯ ಸೇವೆಗಳನ್ನು ಬಲಪಡಿಸುವ ಗುರಿಯನ್ನು ಹೊಂದಿರುವ 108 ಆಂಬ್ಯುಲೆನ್ಸ್ ಸೇವೆಯನ್ನು ಆರೋಗ್ಯ ಇಲಾಖೆಯ ನೇರ ನಿರ್ವಹಣೆಯಡಿ ತರುವ ಪ್ರಸ್ತಾವನೆಗೆ ಸರ್ಕಾರ ಅನುಮೋದನೆ ನೀಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಶುಕ್ರವಾರ ಹೇಳಿದ್ದಾರೆ.

ಈ ಉಪಕ್ರಮವು 108 ಆಂಬ್ಯುಲೆನ್ಸ್ ಸೇವೆಯನ್ನು ಖಾಸಗಿ ನಿಯಂತ್ರಣದಿಂದ ಮುಕ್ತಗೊಳಿಸಿ ಆರೋಗ್ಯ ಇಲಾಖೆಯಡಿ ತರಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಈ ಕ್ರಮದಿಂದಾಗಿ 108 ಆರೋಗ್ಯ ಕವಚ ಸೇವೆಯಲ್ಲಿ ಸಾಕಷ್ಟು ಸುಧಾರಣೆಯಾಗುವ ಭರವಸೆ ಮೂಡಿದ್ದು, ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಸುಮಾರು 250 ಕೋಟಿ ರೂ. ಉಳಿಸುತ್ತದೆ ಎಂದು ಆರೋಗ್ಯ ಸಚಿವರು ಹೇಳಿದ್ದಾರೆ.

715 ಆಂಬ್ಯುಲೆನ್ಸ್‌ಗಳ ಸಮೂಹವನ್ನು ನಿರ್ವಹಿಸಲು ರಾಜ್ಯ ಮಟ್ಟದಲ್ಲಿ ಕೇಂದ್ರೀಯ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ಸ್ಥಾಪಿಸಲಾಗುವುದು ಮತ್ತು ಇದಕ್ಕಾಗಿ '112 NG-ERSS' ಸಾಫ್ಟ್‌ವೇರ್ ಬಳಸಿಕೊಳ್ಳಲು ಯೋಜನೆ ರೂಪಿಸಲಾಗಿದೆ. ಪ್ರತಿ ಜಿಲ್ಲೆಗಳಲ್ಲಿಯೂ 108 ಕಂಟ್ರೋಲ್ ಸೆಂಟರ್ ಗಳು ಕಾರ್ಯನಿರ್ವಹಿಸಲಿದ್ದು, ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ನಿರ್ವಹಣೆಯ ಜವಾಬ್ದಾರಿ ವಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಆಂಬ್ಯುಲೆನ್ಸ್ ಗಳಿಗೆ ಚಾಲಕರು ಮತ್ತು ನರ್ಸಿಂಗ್ ಸಿಬ್ಬಂದಿಯನ್ನು ಜಿಲ್ಲಾ ಮಟ್ಟದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು. ಆರಂಭದಲ್ಲಿ ಚಾಮರಾಜ ನಗರ ಜಿಲ್ಲೆಯಲ್ಲಿ ನಿರ್ವಹಣೆ ಪ್ರಾರಂಭಿಸಲಾಗುತ್ತಿದೆ. ನಂತರದಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ನಿರ್ವಹಣೆ ಕಾರ್ಯ ಆರಂಭವಾಗಲಿದೆ. ಅಲ್ಲದೇ 108 ಹೊರತಾಗಿ ರಾಜ್ಯದಲ್ಲಿರುವ 1000 ಕ್ಕೂ ಹೆಚ್ಚು ಸ್ಟೇಟ್ ಅಂಬ್ಯುಲೆನ್ಸ್ ಗಳನ್ನು ಕೂಡಾ 108 ಕಮಾಂಡ್ ಸೆಂಟರ್ ಅಧೀನಕ್ಕೆ ತರಲು ಯೋಜನೆ ರೂಪಿಸಲಾಗಿದೆ ಎಂದು ಆರೋಗ್ಯ ಸಚಿವರು ಹೇಳಿದ್ದಾರೆ.

# ವಿವಿಧ ಬೇಡಿಕೆಗಳ ಈಡೇರಿಕೆಗಾಗಿ AILU ವತಿಯಿಂದ ಪ್ರತಿಭಟನೆ

ಜನವಾದಿ ವಾರ್ತೆ

ರಾಯಚೂರು ಜೂ 13– ಅಖಿಲ ಭಾರತ ವಕೀಲರ ಒಕ್ಕೂಟ (AILU) ರಾಜ್ಯ ಕರೆಯ ಅನ್ವಯ ಅಖಿಲ ಭಾರತ ವಕೀಲರ ಒಕ್ಕೂಟ ರಾಯಚೂರು ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ವಕೀಲರ ವಿವಿಧ ಪ್ರಮುಖ 13 ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಜಿಲ್ಲಾಧಿಕಾರಿ ಮುಖಾಂತರ ಮುಖ್ಯಮಂತ್ರಿ ಮತ್ತು ಕಾನೂನು ಸಚಿವರಿಗೆ ಮನವಿ ಸಲ್ಲಿಸಿದರು.




ಕರ್ನಾಟಕ ರಾಜ್ಯ ಂಖಐಗ ಸಂಘಟನೆಯು ರಾಜ್ಯದಲ್ಲಿ ವಕೀಲರ ಮತ್ತು ಕಾನೂನು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಚರ್ಚಿಸಿ ಹಲವು ಬೇಡಿಕೆಗಳನ್ನು ಸರಕಾರದ ಮುಂದಿಡುತ್ತಿದೆ. ಪೊಲೀಸರ ಏಕಪಕ್ಷೀಯ ವರ್ತನೆಗಳಿಂದ ವಕೀಲರಿಗೆ ರಕ್ಷಣೆ ನೀಡಬೇಕು ಮತ್ತು ವಕೀಲರ ಸಂರಕ್ಷಣೆ ಕಾಯ್ದೆ–2024ಕ್ಕೆ ಸೂಕ್ತ ತಿದ್ದುಪಡಿಯಾಗಬೇಕು. ಸರ್ವೋಚ್ಚ ನ್ಯಾಯಾಲಯ ಮತ್ತು ಉಚ್ಚ ನ್ಯಾಯಾಲಯದ ಮಾರ್ಗಸೂಚಿಂ–ಯನ್ನು ಪಾಲಿಸಬೇಕು. ಕಾನೂನು ವಿದ್ಯಾರ್ಥಿಗಳನ್ನು ಗೊಂದಲಕ್ಕೆ ತಳ್ಳುವ ಮತ್ತು ಅವರ ಭವಿಷ್ಯವನ್ನು ಅಭದ್ರತೆಯಲ್ಲಿಡುವ ಅವೈಜ್ಞಾನಿಕ ಅಖಿಲ ಭಾರತ ಬಾರ್ ಪರೀಕ್ಷೆ (AIBE) ರದ್ದು ಪಡಿಸಬೇಕು.

ಕಿರಿಯ ವಕೀಲರ ವೃತ್ತಿ ಆರಂಭದ ಬದುಕಿಗೆ ಪೂರಕವಾಗುವಂತೆ, ಃಅಖ ನಿರ್ದೇಶನದಂತೆ 3 ವರ್ಷಗಳ ಕಾಲ ಮಾಸಿಕ ರೂ.20,000/– ಸಹಾಯಧನ ನೀಡಬೇಕು. ರಾಜ್ಯದ ಎಲ್ಲಾ ತಾಲ್ಲೂಕು ವಕೀಲರ ಸಂಘಗಳಿಗೆ ವರ್ಷಕ್ಕೆ ರೂ. 5 ಲಕ್ಷ ಅನುದಾನ ಮಂಜೂರು ಮಾಡಬೇಕು ಮತ್ತು ಜಿಲ್ಲಾ ವಕೀಲರ ಸಂಘಗಳಿಗೆ ರೂ. 10 ಲಕ್ಷ ರೂಪಾಯಿಗಳ ಅನುದಾನ ಮಂಜೂರು ಮಾಡಬೇಕು.

ವಕೀಲರಿಗೆಅವರ ಕಲ್ಯಾಣ ನಿಧಿಯಿಂದ 25 ಲಕ್ಷ ಹಣವನ್ನು ನೀಡಬೇಕು. ರಾಜ್ಯ ಸರ್ಕಾರವು ವಕೀಲರಿಗೆ ಕಡ್ಡಾಯವಾಗಿ ವೈದ್ಯಕೀಯ ಮತ್ತು ಜೀವ ವಿಮಾ ಸೌಲಭ್ಯವನ್ನು ಒದಗಿಸಬೇಕು. ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ವಕೀಲರ ಅಕಾಡೆಮಿಗಳನ್ನು ಸ್ಥಾಪಿಸಬೇಕು. ಕರ್ನಾಟಕ ರಾಜ್ಯದಲ್ಲಿ ಹೆಚ್ಚುವರಿ ನ್ಯಾಯಾಲಯಗಳನ್ನು ಸ್ಥಾಪಿಸಲು ಮುಂದಾಗಬೇಕು. ಹಾಗೆಯೇ ಈಗಿರುವ ನ್ಯಾಯಾಲಯಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು. ರಾಜ್ಯದಲ್ಲಿನ ಎಲ್ಲಾ ನ್ಯಾಯಾಲಯದ ಆವರಣದಲ್ಲಿ ವಕೀಲ–ರಿಗೆ ಚೇಂಬರ್‌ಗಳನ್ನು ಸ್ಥಾಪಿಸಬೇಕು. ವ್ಯಾಪಕ ಭ್ರಷ್ಟಾಚಾರವನ್ನು ತಡೆದು ಕಂದಾಯುದ ವಿಚಾರಗಳನ್ನು ಕಾನೂನು ಪಾಲನೆಗೆ ಒಗ್ಗಿಸಿಕೊಳ್ಳುವ ನಿಟ್ಟಿನಲ್ಲಿ ರೆವೆನ್ಯೂ ಎಸಿ, ಡಿಸಿ ನ್ಯಾಯಾಲಯಗಳಲ್ಲಿ ನಡೆಯುವ ಕಂದಾಯ ಪ್ರಕರಣಗಳಲ್ಲಿ ಬೇರೆ ಬೇರೆ ರೀತಿಯ ಒತ್ತಡಗಳು ಮತ್ತು ವಿಳಂಬದ ಕಾರಣ ಸರಿಯಾದ ರೀತಿಯಲಿ ವಿಚಾರಣೆ ನಡೆಯದೆ ಸಕ್ರಮವಾದ ತೀರ್ಪುಗಳು ಆಗದೆ ಇರುವದರಿಂದ ಕಂದಾಯ ಪ್ರಕಣಗಳನ್ನು ಸಿವಿಲ್ ನ್ಯಾಯಾಲಯಗಳಿಗೆ ವರ್ಗಾಯಿಸಲು ಕ್ರಮ ತೆಗೆದುಕೊಳ್ಳಬೇಕು. ವಕೀಲರಿಗೆ ಟೋಲ್ ಶುಲ್ಕ ರಹಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕು.

ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ಕಾನೂನು ಕಾಲೇಜುಗಳನ್ನು ಸ್ಥಾಪಿಸಬೇಕು ಹಾಗೂ ಈಗಿರುವ ಅನುದಾನಿತ & ಖಾಸಗಿ ಕಾನೂನು ಕಾಲೇಜುಗಳ ಶುಲ್ಕವನ್ನು ಸರ್ಕಾರ ನಿಯಂತ್ರಣ ಮಾಡಬೇಕು. ಹಾಲಿ ಇರುವ ಸರ್ಕಾರಿ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಕಛೇ–ರಿಯನ್ನು ವಿಭಾಗೀಯ ಮಟ್ಟದಲ್ಲಿ ಸ್ಥಾಪಿಸಬೇಕು. ವಕೀಲರ ಸಂಘದ/ಪರಿಷತ್ತಿನ ಚುನಾವಣೆಯಲ್ಲಿ ಮಹಿಳಾ ವಕೀಲರಿಗೆ ಶೇ.33 ರಷ್ಟು ಮೀಸಲಾತಿ ನೀಡಬೇಕು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಾತಿ ಅನುಸಾರ ಪ್ರಾತಿನಿತ್ಯ ನೀಡಬೇಕು ಎಂದು ವಕೀಲರಿಂದ ಸಹಿ ಸಂಗ್ರಹಿಸಿದ ಮನವಿಯನ್ನು ಜಿಲ್ಲಾಧಿಕಾರಿಗೆ ಸಲ್ಲಿಸಿ ಕೇಂದ್ರ, ರಾಜ್ಯ ಸರ್ಕಾರ ಹಾಗೂ ಕೇಂದ್ರ ಮತ್ತು ರಾಜ್ಯ ವಕೀಲರ ಪರಿಷತ್ತು ಈ ಬೇಡಿಕೆಗಳನ್ನು ಒಂದು ತಿಂಗಳೊಳಗಾಗಿ ಈಡೇರಿಸದೆ ಇದ್ದಲ್ಲಿ ವಕೀಲರಗಳು ತಮ್ಮ ಹೋರಾಟವನ್ನು ತೀವ್ರಗೊಳಿಸಿ ತಮ್ಮ ನಡೆಯನ್ನು ವಿಧಾನಸೌಧ ಮತ್ತು ವಕೀಲರ ಪರಿಷತ್‌ಗಳ ಕಡೆ ನಡೆಸಬೇಕಾಗುತ್ತದೆ ಎಂದು ಅಖಿಲ ಭಾರತ ವಕೀಲರ ಒಕ್ಕೂಟದ ರಾಯಚೂರು ಜಿಲ್ಲಾ ಸಮಿತಿಯ ಪದಾಧಿಕಾರಿಗಳು ತಿಳಿಸಿದರು. ಹೋರಾಟವನ್ನು ಉದ್ದೇಶಿಸಿ ಂಖಐಗ ಜಿಲ್ಲಾ ಸಮಿತಿಯ ಅಧ್ಯಕ್ಷರಾದ ಶಶಿಧರಗೌಡ ಕೆಲ್ಲೂರು, ಕಾರ್ಯದರ್ಶಿ ಜಿ.ಎಸ್. ವೀರಭದ್ರಪ್ಪ, ಮುಖಂಡರಾದ ಶಿವಕುಮಾರ ಮ್ಯಾಗಳಮನಿ ಮಾತನಾಡಿದರು. ಈ ಸಂದರ್ಭದಲ್ಲಿ ರಾಯಚೂರು ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಲಕ್ಕಪ್ಪ ಭಂಡಾರಿ, ಖಜಾಂಚಿ ಸೈಯದ್ ನವಾಜ್ ಪಾಷ, ವಕೀಲರಾದ ಈರಮ್ಮ, ರೇಣುಕಾ, ಶಾಂತಿಕುಮಾರಿ, ಶಾಂತಾ ನಾಯಕ, ಗಾಯಿತ್ರಿ, ಸೌಮ್ಯ, ಶಶಿಕಲಾ,ತೇಜಸ್ವಿನಿ, ಆಶಾ ಜ್ಯೋತಿ, ದೀಪಿಕಾ ಪಾಟೀಲ್, ಉಮಾ, ಸುಷ್ಮಾ ಪಾಟೀಲ್, ಬನಶಂಕರಿ, ರೋಹಿಣಿ, ಜೈ ನೀಲಕಂಠ ರಾವ್, ಎಚ್. ದೊಡ್ಡಪ್ಪ, ಲಕ್ಷ್ಮೀಕಾಂತ್, ಹನುಮಂತಪ್ಪ, ತಾಯಪ್ಪ ಭಂಡಾರಿ, ಕೆ, ಪ್ರಹ್ಲಾದ್ ರಾವ್, ಗೌರೀಶ್ ಸ್ವಾಮಿ, ಮಹಾದೇವ, ಮಲ್ಲಪ್ಪ ಚೆನ್ನಪ್ಪ, ರವೀಂದ್ರ, ಮಲ್ಲೇಶಪ್ಪ, ಗೋಪಾಲ ಕೃಷ್ಣ, ಚಂದ್ರ ಮಗಳಿ, ಶ್ರೀಕಾಂತ್, ಶೊಯಬ್, ಪಣಿಶ್ರೀ, ಬಸವನಗೌಡ, ಆಂಜನೇಯ, ಸುನೀಲ್, ಚೇತನ್, ಸಾಗರ್, ಜಯಪಾಲ್, ರಾಮಪ್ಪ, ಮೌನೇಶ್, ಓಂಕಾರ್ ಯಾದವ್, ಸಂತಾನ ಸೇರಿದಂತೆ ಅನೇಕರಿದ್ದರು.

# ರಾಹುಲ್ ಪಾಟೀಲ್ ಗೌರವ ಸನ್ಮಾನ



ಜನವಾದಿ ವಾರ್ತೆ

ಲಿಂಗಸುಗೂರು ಜೂ 13– ಗೋಲ್ಡನ್ ಸಿವಿಲ್ ಇಂಜಿನಿಯರಿಂಗ್ ಪದಾಧಿಕಾರಿಗಳು ಇತ್ತೀಚೆಗೆ ನೇಮಕವಾಗಿದ್ದು ಅದರಲ್ಲಿ ಸಂಘಟನೆಯ ಜಂಟಿ ಕಾರ್ಯದರ್ಶಿಯಾಗಿ ನೇಮಕವಾದ ರಾಹುಲ್ ಪಾಟೀಲ್ ರಿಗೆ ಜಯ ಕರ್ನಾಟಕ ರಕ್ಷಣಾ ಸೇನೆ ಸಂಘಟನೆಯ ತಾಲ್ಲೂಕು ಅಧ್ಯಕ್ಷ ಹನುಮಂತ ನಾಯಕ ನೇತೃತ್ವದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಪ್ರವೀಣ ಕುಮಾರ, ಪ್ರಕಾಶ ಕುರಿ, ನಿಂಗಪ್ಪ ರಾಮಲೂಟಿ, ಶರಣಗೌಡ, ಮೈಹಿನುದ್ದಿನ್, ರಾಯಪ್ಪ, ಹಸೇನ ಸಾಬ್, ಅಂತೋನಿರಾಯ, ಮಲ್ಲೇಶ ನಾಯಕ, ರವಿನಾಯಕ, ವಿಜಯ, ಆದಪ್ಪ, ಶಿವರೆಡ್ಡಿ, ಅಮರೇಗೌಡ, ಶಿವುಪುತ್ರ ಸೇರಿದಂತೆ ಇತರರು ಇದ್ದರು.

# ಜೆಸ್ಕಾಂ ಗ್ರಾಮೀಣ: ಇಂದು ವಿದ್ಯುತ್ ವ್ಯತ್ಯಯ

ಜನವಾದಿ ವಾರ್ತೆ

ರಾಯಚೂರು ಜೂ 13 – ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 14ರ ಮಧ್ಯಾಹ್ನ 12 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜನವಾದಿ
ಜಾಹೀರಾತಿಗಾಗಿ ಸಂಪರ್ಕಿಸಿ:
9448300139

# ಅಖಿಲ ಭಾರತ ವಕೀಲರ ಒಕ್ಕೂಟದಿಂದ ಜಿಲ್ಲಾಧಿಕಾರಿಗಳಿಗೆ ಮನವಿ

ಜನವಾದಿ ವಾರ್ತೆ

ಮಾನ್ವಿ ಜೂ 13– ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಅಖಿಲ ಭಾರತ ವಕೀಲರ ಒಕ್ಕೂಟದ ತಾಲೂಕು ಘಟಕದ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಿಲ್ಲಾಧಿಕಾರಿಗಳಿಗೆ ಗ್ರೇಡ್ –2 ತಹಸೀಲ್ದಾರ ರವರ ಮೂಲಕ ತಾ.ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್ ಮನವಿ ಸಲ್ಲಿಸಿ ಮಾತನಾಡಿ ಪೊಲೀಸರ ಏಕಪಕ್ಷೀಯ ವರ್ತನೆಗಳಿಂದ ವಕೀಲರಿಗೆ ರಕ್ಷಣೆ ನೀಡಬೇಕು ಮತ್ತು ವಕೀಲರ ಸಂರಕ್ಷಣೆ ಕಾಯ್ದೆ–2024ಕ್ಕೆ ಸೂಕ್ತ ತಿದ್ದುಪಡಿಯಾಗಬೇಕು, ಸರ್ವೋಚ್ಚ ನ್ಯಾಯಾಲಯ ಮತ್ತು ಉಚ್ಚ ನ್ಯಾಯಾಲಯದ ಮಾರ್ಗಸೂಚಿಗಳನ್ನು ಪಾಲಿಸಬೇಕು, ಅವೈಜ್ಞಾನಿಕವಾಗಿರುವ ಅಖಿಲ ಭಾರತ ಬಾರ್ ಪರೀಕ್ಷೆ ರದ್ದು ಪಡಿಸಬೇಕು, ಕಿರಿಯ ವಕೀಲರಿಗೆ 2 ವರ್ಷಗಳ ಕಾಲ ಮಾಸಿಕ 10 ಸಾವಿರ ಸಹಾಯಧನ ನೀಡಬೇಕು, ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ವಕೀಲರ ಸಂಘಕ್ಕೆ ವರ್ಷಕ್ಕೆ 10 ಲಕ್ಷ ಹಾಗೂ ತಾಲ್ಲೂಕು ವಕೀಲರ ಸಂಘಗಳಿಗೆ 5 ಲಕ್ಷ ಅನುದಾನ ನೀಡಬೇಕು .ರಾಜ್ಯ ಸರ್ಕಾರದಿಂದ ವಕೀಲರಿಗೆ ವೈದ್ಯಕೀಯ ಮತ್ತು ಜೀವ ವಿಮಾ ಸೌಲಭ್ಯವನ್ನು ಒದಗಿಸಬೇಕು, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಗಳಲ್ಲಿ



ವಕೀಲರ ಅಕಾಡೆಮಿಗಳನ್ನು ಸ್ಥಾಪಿಸಬೇಕು, ರಾಜ್ಯದಲ್ಲಿ ಹೆಚ್ಚುವರಿ ನ್ಯಾಯಾಲಯಗಳನ್ನು ಸ್ಥಾಪಿಸಬೇಕು ನ್ಯಾಯಾಲಯಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಬೇಕು, ವಕೀಲರಿಗೆ ಚೇಂಬರ್‌ಗಳನ್ನು ಸ್ಥಾಪಿಸಬೇಕು,ಕಂದಾಯ ಇಲಾಖೆಯ ಜಿಲ್ಲಾಧಿಕಾರಿಗಳ,ಉಪವಿಭಾಗಧಿಕಾ–ರಿಗಳ ನ್ಯಾಯಾಲಯುಗಳಲ್ಲಿ ನಡೆಯುವ ಕಂದಾಯ ಪ್ರಕರಣಗಳಲ್ಲಿ ಒತ್ತಡದಿಂದಾಗಿ ಕಾಕ್ಷಿದಾರರಿಗೆ ನ್ಯಾಯದೊರೆಯದೆ ಇರುವುದರಿಂದ ಕಂದಾಯ ಪ್ರಕಣಗಳನ್ನು ಸಿವಿಲ್ ನ್ಯಾಯಾಲಯಗಳಿಗೆ ವರ್ಗಾಯಿಸಬೇಕು. ವಕೀಲರಿಗೆ ಟೋಲ್ ಶುಲ್ಕ ರಹಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕು, ರಾಜ್ಯದಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ಕಾನೂನು ಕಾಲೇಜುಗಳನ್ನು ಸ್ಥಾಪಿಸಬೇಕು' ಅನುದಾನಿತ ಮತ್ತು ಖಾಸಗಿ ಕಾನೂನು ಕಾಲೇಜುಗಳ ಶುಲ್ಕವನ್ನು ಸರ್ಕಾರ ನಿಯಂತ್ರಣ ಮಾಡಬೇಕು. ಸರ್ಕಾರಿ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು, ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಕಛೇರಿಯನ್ನು ವಿಭಾಗೀಯ ಮಟ್ಟದಲ್ಲಿ ಸ್ಥಾಪಿಸಬೇಕು, ವಕೀಲರ ಸಂಘದ,ಪರಿಷತ್ತಿನ ಚುನಾವಣೆಯಲ್ಲಿ ಮಹಿಳಾ ವಕೀಲ–ರಿಗೆ ಶೇ.33 ರಷ್ಟು ಮೀಸಲಾತಿ ನೀಡಬೇಕು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಾತಿ ಅನುಸಾರ ಪ್ರಾತಿನಿದ್ಯ ನೀಡಬೇಕೆ ಇಲ್ಲದೆ ಇದ್ದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು

ಹಿರಿಯ ವಕೀಲರಾದ ಮಲ್ಲಿಕಾರ್ಜುನ ಪಾಟೀಲ್, ಚನ್ನಬಸವನಾಯಕ, ಮನೋಹರ್ ವಿಶ್ವಕರ್ಮ, ವಿಶ್ವಾನಾಥ–',ಸೈಯದ್ ತನ್ವೀರ್ ವಕೀಲರು, ಯದು ಉಲ್ಲಾ ಹುಸೇನಿ ಮತ್ವಾಲೆ, ಹನುಮಂತಪ್ಪ ದೇವಿಪುರ ವಕೀಲರು, ಯಲ್ಲಪ್ಪ ಬಾದರದಿನ್ನಿ, ನಿಜಾಂ ಪಾಷಾ, ಹನುಮಂತರಾಯ ಕಪ್ಪಗಲ್, ದತ್ತಾತ್ರೇಯ ಹಿರೇಕೊಟ್ನೆಕಲ್, ಹನಮೇಶ ನಾಯಕ ಜೀನೂರು, ಶಿವಕುಮಾರ್, ಸಾಬಣ್ಣ ನಂದಿಹಾಳ, ಶ್ರೀನಿವಾಸ ನಂದಿಹಾಳ, ಹನುಮಂತ ಬ್ಯಾಗವಾಟ್, ಮಲ್ಲೇಶ ಮಾಚನೂರ ಸೇರಿದಂತೆ ಇನ್ನಿತರ ವಕೀಲರು ಇದ್ದರು.

# ಡೇ–ನಲ್ಮ್ ಅಡಿಯಲ್ಲಿ ನೊಂದಾಯಿತ ಮಹಿಳಾ ಸ್ವ–ಸಹಾಯ ಸಂಘಗಳಿಗೆ ಅರ್ಜಿ ಅಹ್ವಾನ

ಜನವಾದಿ ವಾರ್ತೆ

ದೇವದುರ್ಗ ಜೂ 13– ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಚ ಭಾರತ ಮಿಷನ್ 2.0 ಐ.ಇ.ಸಿ ಘಟಕದಡಿ 3 ವರ್ಷದ ಅವಧಿಗೆ ಐ.ಇ.ಸಿ ಚಟುವಟಿಕೆಗಳನ್ನು ಕೈಗೊಳ್ಳಲು ಡೇ–ನಲ್ಮ್ ಅಡಿಯಲ್ಲಿ ನೊಂದಾಯಿತ ಮಹಿಳಾ ಸ್ವ–ಸಹಾಯ ಸಂಘಗಳ ಸದಸ್ಯರನ್ನು ಅರಟಟಣಟಿಣಥಿ ಒಠಛುಟುದಜಡಿ ಎಂಬುದಾಗಿ ನೇಮಕಾತಿ ಮಾಡಿಕೊಳ್ಳಲು ಈ ಮೂಲಕ ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ, ನಿಯಮಗಳು ಮತ್ತು ಸಂಭಾಷಣೆ ವಿವರಗಳು ದೇವದುರ್ಗ ಪುರಸಭೆಯ ವೆಬ್ ಸೈಟ್ http://




www.devadurgatown.mrc.gov.in/ ಲಭ್ಯ ಇರುತ್ತದೆ.

ಅರ್ಜಿ ಸಲ್ಲಿಸಲು ಆಸಕ್ತಿಯುಳ್ಳವರು ದೇವದುರ್ಗ ಪುರಸಭೆಯ ಡೇ–ನಲ್ಮ್ ನಲ್ಲಿ ನೊಂದಾಯಿತರಾಗಿರುವ ಸ್ವ–ಸಹಾಯ ಸಂಘಗಳ ಸದಸ್ಯರಾಗಿರಬೇಕು. ಮತ್ತು 10 ನೇ ತರಗತಿ ವಿದ್ಯಾರ್ಹತೆ ಪೂರ್ಣಗೊಳಿಸರಬೇಕು. ಕನ್ನಡ ಮಾತನಾಡಲು, ಬರೆಯುಲು ತಿಳಿದಿರಬೇಕು. ಹಾಗೂ ಗಣ–ಕಯಂತ್ರದಲ್ಲಿ ಅಪ್ಲಿಕೇಷನ್‌ನಲ್ಲಿ ಕೆಲಸ ಮಾಡಲು ಸಾಮಾರ್ಥ್ಯವಿರುವ ಮತ್ತು ಈ ಹಿಂದೆ ನಗರ ಮತ್ತು ಗ್ರಾಮಗಳಲ್ಲಿ ಐ.ಇ.ಸಿ ಚಟುವಟಿಕೆ ಹಮ್ಮಿಕೊಂಡ ಅನುಭವ ಇರುವವರಿಗೆ ಆದ್ಯತೆ ನೀಡಲಾಗುವುದು. ಆಸಕ್ತಿ ಅಭಿವ್ಯಕ್ತಿಗಾಗಿ ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡಿ ಅರ್ಜಿಯೊಂದಿಗೆ 1) ಆಧಾರ್ ಕಾರ್ಡ್ 2 ಚುನಾವಣಾ ಗುರುತಿನ ಚೀಟಿ 3) ಶೈಕ್ಷಣಿಕ ಅರ್ಹತೆ ಪ್ರಮಾಣ ಪತ್ರ 6) ಡೇ–ನಲ್ಮ್ ಅಧಿಕಾರಿಯಿಂದ ಪಡೆದ ಅನುಮೋದನೆ ಪತ್ರ ಲಗತಿಸಿ ದಿನಾಂಕ 26–06–2025 ರಂದು ಸಾಯಂಕಾಲ ಸಂಜೆ 5 ಗಂಟೆ ಒಳಗಾಗಿ ಈ ಕಚೇರಿಗೆ ಖುದ್ದಾಗಿ ಅಥವಾ – ka.devadurga.tmc@gmail.com ಮೂಲಕ ಸಲ್ಲಿಸತಕ್ಕದ್ದು, ಆಯ್ಕೆಯಾಗುವ ಅಭ್ಯರ್ಥಿಗಳ ವಿಷಯ ಜ್ಞಾನದ ತಿಳುವಳಿಕೆ ನಿರ್ಣಯದ ಕುರಿತು ಸಂದರ್ಶನದ ದಿನಾಂಕ, ಸಮಯು ಹಾಗೂ ಸ್ಥಳವನ್ನು ನಂತರದಲ್ಲಿ ತಿಳಿಸಲಾಗುವುದು ಎಂದು ಪುರಸಭೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಮಾವಿನಹಣ್ಣಿಗೆ ಬೆಂಬಲ ಬೆಲೆ ಘೋಷಿಸುವಂತೆ ಕೇಂದ್ರಕ್ಕೆ ಸಿದ್ದರಾಮಯ್ಯ ಆಗ್ರಹ

ಬೆಂಗಳೂರು ಜೂ 13– ಮಾವಿನಹಣ್ಣುಗಳ ಬೆಲೆ ಮಾರುಕಟ್ಟೆಯಲ್ಲಿ ತೀವ್ರವಾಗಿ ಕುಸಿತವಾಗಿದ್ದು, ಕೇಂದ್ರ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಬೆಂಬಲ ಬೆಲೆ ಘೋಷಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಅವರಿಗೆ ತುರ್ತು ಪತ್ರ ಬರೆದಿರುವ ಮುಖ್ಯಮಂತ್ರಿಯವರು, ಮಾವಿನಹಣ್ಣು ಮಾರುಕಟ್ಟೆ ಮಧ್ಯ ಪ್ರವೇಶಕ್ಕೆ ಮನವಿ ಮಾಡಿದ್ದಾರೆ.



ರಾಜ್ಯದಲ್ಲಿ 1.39 ಲಕ್ಷ ಹೆಕ್ಟೇರ್‌ನಲ್ಲಿ ಮಾವು ಬೆಳೆಯುತ್ತಿದ್ದು, ಸರಿಸುಮಾರು 8 ರಿಂದ 10 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆ ನಿರೀಕ್ಷೆ ಇದೆ. ಪ್ರಮುಖವಾಗಿ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಗಳಲ್ಲಿ ಮಾವು ಹೆಚ್ಚಿನ ಉತ್ಪಾದನೆಯಾಗಿದೆ ಎಂದು ತಿಳಿಸಿದ್ದಾರೆ. ಮೇ, ಜೂನ್ ತಿಂಗಳಿನಲ್ಲಿ ಮಾವಿನಹಣ್ಣಿನ ಮಾರುಕಟ್ಟೆ ಸಹಜವಾಗಿ ಪ್ರತಿ ಕ್ವಿಂಟಾಲ್‌ಗೆ 12 ಸಾವಿರ ರೂ.ಗಳಿರುತ್ತದೆ. ಪ್ರಸ್ತುತ ಅದು 3 ಸಾವಿರಕ್ಕೆ ಕುಸಿದಿದೆ. ಕರ್ನಾಟಕ ರಾಜ್ಯ ಕೃಷಿ ಮೌಲ್ಯ ಆಯೋಗದ ವರದಿಯ ಪ್ರಕಾರ ಪ್ರತೀ ಕ್ವಿಂಟಾಲ್ ಮಾವು ಉತ್ಪಾದನೆಗೆ 5,460 ರೂ.ಗಳ ವೆಚ್ಚವಾಗುತ್ತಿದೆ. ಉತ್ಪಾದನೆ ಮತ್ತು ಮಾರುಕಟ್ಟೆ ದರದಲ್ಲಿ ಅಜಗಜಾಂತರ ವ್ಯತ್ಯಾಸವಿದೆ. ಹೀಗಾಗಿ ಕೇಂದ್ರ ಸರ್ಕಾರ ಕೂಡಲೇ ಬೆಂಬಲ ಬೆಲೆಯನ್ನು ಘೋಷಿಸಿ ನೆಫೆಡ್ ಮತ್ತು ಎನ್‌ಸಿಸಿಎಫ್ ಮೂಲಕ ಮಾವು ಖರೀದಿಯನ್ನು ಆರಂಭಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕೇಂದ್ರ ಸರ್ಕಾರ ಸಕಾಲಿಕ ಮಧ್ಯಪ್ರವೇಶ ಮಾಡಿದರೆ ಭವಿಷ್ಯದಲ್ಲಿ ಗ್ರಾಮೀಣ ಭಾಗದಲ್ಲಾಗುವ ಏರುಪೇರುಗಳನ್ನು ತಡೆಗಟ್ಟಬಹುದು. ಸಾಮಾಜಿಕ, ಆರ್ಥಿಕ ಸಂಕಷ್ಟಗಳನ್ನು ನಿವಾರಿಸಲು ಸಾಧ್ಯವಾಗುತ್ತದೆ ಎಂದಿದ್ದಾರೆ.

# ಮಾನ್ವಿ : ಪಿಡಬ್ಲ್ಯೂಡಿ ಕ್ಯಾಂಪ್ ಹಿರಿಯ ಪ್ರಾಥಮಿಕ ಶಾಲೆ ಸ್ಥಳಾಂತರ ವಿರೋಧಿಸಿ ಮನವಿ

ಜನವಾದಿ ವಾರ್ತೆ

ಮಾನ್ವಿ ಜೂ 13– ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಎ. ಐ.ಡಿ. ಎ ಸ್. ಓ. ತಾಲೂಕ ಘಟಕದಿಂದ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ ರವರಿಗೆ ಜಿಲ್ಲಾಧ್ಯಕ್ಷ ಹಯ್ಯಾಳಪ್ಪ ಮನವಿ ಸಲ್ಲಿಸಿ ಮಾತನಾಡಿ ಮಾನ್ವಿ ತಾಲೂಕಿನ ಪಿಡಬ್ಲ್ಯೂಡಿ ಕ್ಯಾಂಪ್‌ನಲ್ಲಿ ಇರುವ ಕಿರಿಯ ಪ್ರಾಥಮಿಕ ಶಾಲೆಯ ಎದುರು ಭಾಗದಲ್ಲಿ ಒಂದು ಬೃಹತ್ ಸರ್ಕಾರಿ ಕಟ್ಟಡದ ನಿರ್ಮಾಣ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಶಾಲೆಯನ್ನು ಸ್ಥಳಾಂತರಿ ದಿಂದಾಗಿ ಶಾಲೆಗೆ ಬರುವ ಮಕ್ಕಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಲಿದೆ

ಈ ಶಾಲೆಗೆ ಹೆಚ್ಚಿನ ಸಂಖ್ಯೆಯ ಮಕ್ಕಳು ಆರ್ಥಿಕವಾಗಿ ಹಿಂದುಳಿದ ಕುಟುಂಬದವರಾಗಿದ್ದು ಮಕ್ಕಳ ಪೋಷಕರು ಬಹುಪಾಲು ಕಾರ್ಮಿಕ ವರ್ಗದವರು ಆಗಿದ್ದು, ಮಕ್ಕಳನ್ನು




ದೂರದ ಶಾಲೆಗೆ ಕಳುಹಿಸಲು ತೊಂದರೆಯಾಗುತ್ತದೆ.ಈ ಹಿನ್ನೆಲೆಯಲ್ಲಿ, ಈಗಾಗಲೇ ಶಾಲೆಗೆ ಮಂಜೂರಾದ ಹೊಸ ಕಟ್ಟಡವನ್ನು ಪಿಡಬ್ಲ್ಯೂಡಿ ಕ್ಯಾಂಪ್ ಪ್ರದೇಶದಲ್ಲಿಯೇ ನಿರ್ಮಿಸಲು ಅವಕಾಶ ಕಲ್ಪಿಸಬೇಕೆಂದು ಒತ್ತಾಯಿಸಿದರು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ. ಮಾತನಾಡಿ ಶಾಲೆಗೆ ಮಂಜೂರಾದ ಹೊಸ ಕಟ್ಟಡವನ್ನು ಪಿಡಬ್ಲ್ಯೂಡಿ ಪ್ರದೇಶದಲ್ಲಿಯೇ ನಿರ್ಮಿ ಸುವುದಾಗಿ ಭರವಸೆ ನೀಡಿದರು.

ಜಿಲ್ಲಾ ಕಾರ್ಯದರ್ಶಿ ಬಸವರಾಜ್, ಸದಸ್ಯರಾದ ಬಸವರಾಜ್ ಗುವಲ್ದಿನ್ನಿ ಇದ್ದರು.

# ಬುಲೋರೊ ವಾಹನದಲ್ಲಿ ಹಂದಿ ಕದ್ದೊಯ್ದ ಖದೀಮರು! ಬಾಟಲಿ ಬೀಸಿ ಎಸ್ಕೇಪ್.!

ಜನವಾದಿ ವಾರ್ತೆ

ಜಾಲಹಳ್ಳಿ ಜೂ 13– ಪಟ್ಟಣದಲ್ಲಿ ಗುರುವಾರ ರಾತ್ರಿ ಕಳ್ಳರು ಬುಲೋರ ವಾಹನದಲ್ಲಿ ಹಂದಿ ಕಳ್ಳತನ ಮಾಡಿ ಕದ್ದೊಯ್ದ ಘಟನೆ ಬೆಳಕಿಗೆ ಬಂದಿದೆ.

ಬೆಳಿಗ್ಗೆ 3 ಗಂಟೆ ಸುಮಾರಿಗೆ ಬುಲೋರೊ ವಾಹನದಲ್ಲಿ ಹಂದಿ ಕದ್ದೊಯುತ್ತಿರುವುದನ್ನ ಗಮನಿಸಿದ ಕೆಲವರು ಟೋಲ್ ಗೇಟ್ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ, ಸಿಬ್ಬಂದಿ ಬ್ಯಾರಿಕೇಡ್ ಅಡ್ಡಗಟ್ಟಿದ್ದನ್ನ ಗಮನಿಸಿದ ಕಳ್ಳರು ವಾಹನವನ್ನ ವಾಪಸ್ ಹಿಂದಿರುಗಿಸಿದ್ದಾರೆ ಬುದ್ದನಗರದಲ್ಲಿ ಕೆಲವರು ಅಡ್ಡಗಟ್ಟಲು ಯತ್ನಿಸಿದ್ದಾರೆ, ಆದರೆ ಕಳ್ಳರು ಮನಬಂದಂತೆ ಬಾಟಲಿಗಳನ್ನ ಬಿಸಿ ಪರಾರಿಯಾಗಿದ್ದಾರೆಂದು ಪ್ರತ್ಯಕ್ಷದರ್ಶಿಗಳು ಪತ್ರಿಕೆಗೆ ತಿಳಿಸಿದ್ದಾರೆ.

ಕೇವಲ ಹಂದಿ ಮಾತ್ರವಲ್ಲದೆ ದನಕರುಗಳು ಕೋಳಿ,ಅಂಗಡಿಗಳನ್ನ ಕಳ್ಳತನ ಮಾಡಲು ರಾತ್ರಿ ವೇಳೆ ನಂಬರ್ ಪ್ಲೇಟ್ ಇಲ್ಲದ ಬುಲೋರೊ ವಾಹನವನ್ನ ತೆಗೆದುಕೊಂಡು ಬರುತ್ತಾರೆ, ಅವರ ಬಳಿ ಚಾಕು ಚುರಿ ಮಚ್ಚು ಬಾಟಲಿ ಕಾರದಪುಡಿ ಎಲ್ಲನೂ ಇರುತ್ತದೆ ಅಡ್ಡಗಟ್ಟಲು ಹೋದವರನ್ನ ಕೊಲ್ಲಲು ಹಿಂಜರಿಯುವುದಿಲ್ಲ ಎಂಬ ಮಾತು ಸಾರ್ವಜನಿಕರಿಂದ ಕೇಳಿಬರುತ್ತಿದೆ. ರಾತ್ರಿವೇಳೆ ಪೋಲೀಸರು ಪ್ರತ್ಯೇಕ ಸ್ಥಳಗಳಲ್ಲಿ ಪಂಚ್ ಗೆ ಸಿಮಿತವಾದ್ರ.?– ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ.

# ಭಾರತಮಾಲಾ ರಸ್ತೆ ಕಾಮಗಾರಿಯ ವೀಕ್ಷಿಸಿದ ಸಂಸದ ಜಿ ಕುಮಾರ ನಾಯಕ

ಜನವಾದಿ ವಾರ್ತೆ

ರಾಯಚೂರು ಜೂ 13– ಜಿಲ್ಲೆಯಲ್ಲಿ ಹಾದುಹೋಗಿರುವ ಚೆನ್ನೈ ಸೂರತ್ ರಸ್ತೆಯನ್ನು ರಾಯಚೂರು–ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಕುಮಾರ ನಾಯಕರವರು ಭಾರತ್ ಮಾಲಾ ರಸ್ತೆಯ ಕಾಮಗಾರಿ ಗುಣಮಟ್ಟದ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ವೀಕ್ಷಣೆ ನಡೆಸಿ ಸಭೆ ನಡೆಸಿದರು. ಪ್ರಾಧಿಕಾರದ ಕ್ಯಾಂಪ್ ಗೆ ಭೇಟಿ ನೀಡಿ ಕಾಮಗಾರಿಯ ಗುಣಮಟ್ಟವನ್ನು ಪರೀಕ್ಷಿಸಿದರು. ಹಾಗೆ ಕಾಮಗಾ–ರಿಯೂ ಗುಣಮಟ್ಟದಿಂದ ಕೂಡ ಇರಬೇಕು ಆದಷ್ಟು ಬೇಗನೆ ಈ



ಕಾಮಗಾರಿ ಪೂರ್ಣಗೊಳ್ಳಬೇಕು, ಕ್ರ್ಯಾಕ್ ಕಂಡುಬಂದಿರುವ ಸ್ಥಳಗಳಲ್ಲಿ ಪುನಃ ಕೆಲಸವನ್ನು ಮಾಡಿಸಲು ರಾಷ್ಟ್ರೀಯ ಪ್ರಾಧಿಕಾರದ ಯೋಜನೆ ನಿರ್ದೇಶಕರಿಗೆ ಸೂಚಿಸಿದರು. ಭಾರತ್ ಮಾಲಾ ಯೋಜನೆಯ ಪ್ಯಾಕೇಜ್–3 ಮತ್ತು 4 ನನ್ನ ಲೋಕಸಭಾ ಕ್ಷೇತ್ರ ವ್ಯಾಪ್ತಿ ಇರುವುದರಿಂದ ಈ ಕಾಮಗಾ–ರಿಯು ಅತ್ಯಂತ ಗುಣಮಟ್ಟದಿಂದ ಕೂಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನೆ ನಿರ್ದೇಶಕರು ಶ್ರೀ ಭಾವನೇಶ್ ಕುಮಾರ, ಪ್ರಾಧಿಕಾರದ ಸಿಬ್ಬಂದಿಗಳಾದ ಮಂಜುನಾಥ್ ಸೇ–ರಿದಂತೆ ಅನೇಕರು ಉಪಸ್ಥಿತರಿದ್ದರು.

Printed by , Published by, Owned by : basavaraj H , Printed and Published at Basavashree Printers and Publishers, H.No.1-11-54/32, Prashanth Colony, RAICHUR-584101. Editor. BASAVARAJ H